# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 100
Volume - 02 Issue - 100
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462
RNI No: KARKAN/2023/88462
ಚಿತ್ರದುರ್ಗ
Chitradurga
ದಿನಾಂಕ: 04–11–2024 ಸೋಮವಾರ
Date: 04-11-2024 Monday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ವೈಶಿಷ್ಟ್ಯ, ವೈವಿಧ್ಯಮಯ ಜನಪದರ ಬೆಳಕಿನ ಹಬ್ಬದ ಸೊಗಡು 2

ವಕ್ಫ್: ರೈತರಿಗೆ ನೀಡಿರುವ ನೋಟೀಸ್ ತಕ್ಷಣ ವಾಪಸ್: ಅಧಿಕಾರಿಗಳಿಗೆ ಸೂಚನೆ 3

ಚನ್ನಪಟ್ಟಣ ಉಪ ಚುನಾವಣೆ: ರಾತ್ರೋರಾತ್ರಿ ರು.5000 ಗಿಫ್ಟ್ ಕೂಪನ್ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಶೇಂಗಾ ಚೀಲಗಳನ್ನು ಮಾರುಕಟ್ಟೆಗೆ ಬಿಟ್ಟಿದ್ದ ರೈತನಿಗೆ 33.920 ರೂ ಪಂಗನಾಮ

#### ಅಂಗಡಿ ಮಾಲಿಕನಿಂದ ರೈತನಿಗೆ ಮೋಸ: ಜಿಲ್ಲಾಧಿಕಾರಿಗೆ ದೂರು

» **ಹೊಸದುರ್ಗ**

ತಾಲೂಕಿನ ರೈತನೋರ್ವ ತಾನು ಬೆಳೆದಿದ್ದ ಶೇಂಗಾ ಚೀಲಗಳನ್ನು ಮಾರಕಟ್ಟೆಗೆ ಬಿಟ್ಟ ಪರಿಣಾಮ ಅಂಗಡಿಯ ಮಾಲಿಕನೋರ್ವ ರೈತನ ಹಣಕ್ಕೆ ಪಂಗನಾಮ ಹಾಕಿದ್ದು ಈ ಬಗ್ಗೆ ರೈತ ಜಿಲ್ಲಾಧಿಕಾರಿಯವರಿಗೆ ದೂರು ನೀಡಿರುವ ಪ್ರಕರಣ ಬೆಳಕಿಗೆ ಬಂದಿದ್ದು ಈ ವಿಚಾರವಾಗಿ ದಾಖಲೆ ಸಮೇತ ರೈತ ಬಿ.ಎಸ್.ಪ್ರಕಾಶ್ ಲಿಖಿತವಾಗಿ ದೂರು ನೀಡಿದ್ದಾರೆ. ಪ್ರಕರಣದ ವಿವರ: ತಾಲೂಕಿನ ಬುರುಡೇಕಟ್ಟೆ ಗ್ರಾಮದ ಬಿ.ಎಸ್.ಪ್ರಕಾಶ್ ಬಿನ್ ಸಿದ್ದರಾಮಪ್ಪ ಎಂಬುವವರು ಸೆ.30 ರಂದು ಸೋಮವಾರ ತಾನು ಬೆಳೆದ ಹನ್ನೆರಡುವರೆ ಚೀಲ ಶೇಂಗವನ್ನು ಚಿತ್ರದುರ್ಗದ ಮಾರುಕಟ್ಟೆಗೆ ಬುಲೇರೋ ವಾಹನದಲ್ಲಿ ಚಿತ್ರದುರ್ಗದ ಶೃಂಗೇರಿ ಶಾರದಾಂಭ ಟ್ರೇಡರ್ಸ್ ಅಂಗಡಿ ಮೂಲಕ ಎಸ್.ಜೆ ಮಲ್ಲಿಕಾರ್ಜುನ್ ಎಂಬುವವರ ಅಂಗಡಿಗೆ ಬಂದಿದ್ದು ತನ್ನ ಶೇಂಗಾದ ರಾಶಿಗೆ ಲಾಟ್ ನಂಬರ್ 15 ಎಂದು ನಮೂದಿಸಿ ಟೆಂಡರ್‌ಗೆ ಬಿಡಲಾಗಿತ್ತು, ಲಾಟ್ ನಂಬರ್ 15 ಶೇಂಗರಾಶಿ ಖರೀದಿದಾರರಾದ ಶ್ರೀ ಮಾತಾ ಟ್ರೇಡರ್ಸ್ ನವರಿಗೆ ನಿದಿಯಾದ 10 ಕ್ವಿಂಟಲ್ 1 ಕೆ.ಜಿ ಎಂದು ತೂಕ ಮಾಡಿ ಪಟ್ಟಿಯನ್ನ ಮಾಡಲಾಗಿತ್ತು, ದಲ್ಲಾಳಿ ಅಂಗಡಿಯ ಮಾಲಿಕ ಎಸ್.ಜೆ ಮಲ್ಲಿಕಾರ್ಜುನ್ ಈಗ ಹಣದ ಸಮಸ್ಯೆ ಇದೆ ರೂ 33.920 ರೂ ಹಣವನ್ನ ಪೋನ್ ಪೇ ಮೂಲಕ ಬೆಳಿಗ್ಗೆ ತಲುಪಿಸುತ್ತೇನೆ ಎಂದು ಹೇಳಿ ಕಳುಹಿಸಿದ್ದಾರೆ, ಮಂಗಳವಾರ ಕಳೆದರೂ ಅವರಿಂದ ಯವುದೇ ಪೋನ್ ಪೇ ಹಣ ಜಮಾ ಆಗಲಿಲ್ಲದ ಕಾರಣ ಬುಧವಾರ ಮತ್ತೆ ರೈತ ಪ್ರಕಾಶ್ ಬಂದು ಕೇಳಿದಾಗ ಇವತ್ತು ಕೂಡ ಹಣದ ಸಮಸ್ಯೆಯಾಗಿದೆ ದಯವಿಟ್ಟು ನಾಳೆ (ಗುರುವಾರ) ಬೆಳಿಗ್ಗೆ ಪೋನ್ ಪೇ ಮಾಡಿಸುತ್ತೇನೆ ಎಂದು ಹೇಳಿ ಬಸ್ ಖರ್ಚಿಗೆ ಎಂದು 500 ರೂಗಳನ್ನ ಮಾತ್ರ ಕೊಟ್ಟು ಕಳುಹಿಸಿದ್ದಾರೆ, ಮತ್ತೆ ಅದೇ ರಾಗ ಅದೇ ಹಾಡು ಆಗಿದೆ ರೈತ ಪ್ರಕಾಶ್ ಮತ್ತೆ ಶುಕ್ರವಾರ ಸಂಜೆ 4 ಗಂಟೆ ಸಮಯಕ್ಕೆ ಮಾರುಕಟ್ಟೆಗೆ ಹೋಗಿ ನನ್ನ ಹಣ 33.920 ರೂ ಗಳನ್ನು ಕೊಡಿ ಎಂದು ಕೇಳಿದಾಗ ಅಂಗಡಿ ಮಾಲಿಕ ಎಸ್.ಜೆ ಮಲ್ಲಿಕಾರ್ಜುನ್. ಅವನ ಅಣ್ಣ ಮತ್ತಿಬ್ಬರು ಸೇರಿ ಹಮಾಲಿಯವರ ಎದುರೇ ದೌರ್ಜನ್ಯದಿಂದ ಮೊದಲ ಟೆಂಡರ್ ದಿನವೇ ಪೂರಾ ಹಣ ಕೊಟ್ಟಿದ್ದೇವೆ, ನಿನಗೆ ಯಾವುದೇ ಹಣ ಕೊಡುವುದು ಇಲ್ಲ, ಎಂದು ಹೇಳಿ ಗೂಂಡ ವರ್ತನೆಯನ್ನ ಮಾಡುತ್ತಾ ಹಲ್ಲೆ ಮಾಡಿದ್ದಾರೆ ಎಂದು ಪ್ರಕಾಶ್ ನೀಡಿರುವ ದೂರಿನಲ್ಲಿ ಉಲ್ಲೇಖಿಸಿದ್ದು ಈ ವಿಚಾರವಾಗಿ ಚಿತ್ರದುರ್ಗ ಎಪಿಎಂಸಿ ಮಾರುಕಟ್ಟೆ ಕಾರ್ಯದರ್ಶಿಯವರಿಗೂ ಕೂಡ ದೂರು ನೀಡಲಾಗಿದೆ ಎಂದು ಹೇಳೀರುವ ಅವರು ಚಿತ್ರದುರ್ಗದ ಶೃಂಗೇರಿ ಶಾರದಾಂಭ ಟ್ರೇಡರ್ಸ್ ಅಂಗಡಿ ಮೂಲಕ ಎಸ್.ಜೆ ಮಲ್ಲಿಕಾರ್ಜುನ್ ಎಂಬುವವರ ವಿರುದ್ದ ಸೂಕ್ತ ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕೆಂದು ಜಿಲ್ಲಾಧಿಕಾರಿಯವರಿಗೆ ನೀಡಿರುವ ದೂರಿನಲ್ಲಿ ಮನವಿ ಮಾಡಿಕೊಂಡಿದ್ದಾರೆ.

### ಎಲ್ಲೆಡೆ ಗಂಗಾಮಾತೆಯ ದರ್ಶನ: ಸಾರ್ವಜನಿಕರಿಗೆ ನೆಮ್ಮದಿಯ ಜೀವನ

» **ಚಳ್ಳಕೆರೆ**

ಕಳೆದ ಹತ್ತಾರು ವರ್ಷಗಳಿಂದ ಈ ಭಾಗದಲ್ಲಿ ಉತ್ತಮ ಮಳೆಯಾಗದ ಹಿನ್ನೆಲೆಯಲ್ಲಿ ರೈತರು ಸಂಕಷ್ಟಕ್ಕೀಡಾಗಿದ್ದರು. ಮಳೆ, ಬೆಳೆ ಇಲ್ಲದೆ ರೈತ ಮುಖದಲ್ಲಿ ಸಂತೋಷವೇ ಕಾಣೆಯಾಗಿತ್ತು. ಪ್ರತಿನಿತ್ಯ ಮಳೆಯಾಗಿ ಆಕಾಶದತ್ತ ನೋಡುವ ದೃಶ್ಯ ಸಾಮಾನ್ಯವಾಗಿತ್ತು. ಆದರೆ, ಇಂದು ದೇವರ ಕೃಪೆಯಿಂದ ಎಲ್ಲೆಡೆ ಮಳೆಯಾಗಿದ್ದು, ಎಲ್ಲರಿಗೂ ಗಂಗಾಮಾತೆಯ ಆಶೀರ್ವಾದ ದೊರಕಿದೆ ಎಂದು ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ಅವರು, ತಾಲ್ಲೂಕಿನ ತಳಕು ಹೋಬಳಿಯ ಕೋಡಿಹಳ್ಳಿ ಗ್ರಾಮದ ಕೆರೆತುಂಬಿ ಕೋಡಿಬಿದ್ದ ಪರಿಣಾಮವಾಗಿ ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯಿತಿ ಆಡಳಿತದ ಸಹಕಾರದೊಂದಿಗೆ ಕೆರೆಗೆ ಬಾಗಿನ ಅರ್ಪಿಸಿ ಮಾತನಾಡಿದರು. ಪ್ರಸ್ತುತ ವರ್ಷ ತಳಕು ಮತ್ತು ನಾಯಕನಹಟ್ಟಿ ಹೋಬಳಿಗಳಲ್ಲಿ ನಿರೀಕ್ಷೆಗೂ ಮೀರಿ ಉತ್ತಮ ಮಳೆಯಾಗಿದೆ. ಬಹುತೇಕ ಎಲ್ಲಾ ಕೆರೆಗಳು ತುಂಬಿ ಕೋಡಿಬಿದ್ದಿವೆ.

ಪುಟ ↘ 2

### ಸಾಣೇಹಳ್ಳಿಯಲ್ಲಿ ಇಂದಿನಿಂದ ರಾಷ್ಟ್ರೀಯ ನಾಟಕೋತ್ಸವ

# ರಂಗಪ್ರಿಯರ ಸಂಗಮದ ಜಾತ್ರೆ

**ಹೊಸದುರ್ಗ ತಾಲ್ಲೂಕು ಸಾಣೇಹಳ್ಳಿಯ ಶ್ರೀ ಶಿವಕುಮಾರ ಕಲಾ ಸಂಘ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರ ನೇತೃತ್ವದಲ್ಲಿ ಇದೇ ದಿನಾಂಕ 4 ರಿಂದ 9 ರವರೆಗೆ ಒಟ್ಟು 6 ದಿನಗಳ ಕಾಲ ನಡೆಯಲಿರುವ ರಾಷ್ಟ್ರೀಯ ನಾಟಕೋತ್ಸವದ ನಿಮಿತ್ತ ಈ ಕಿರು ಪರಿಚಯ**

» **ನಾಗತಿಹಳ್ಳಿಮಂಜುನಾಥ್**







ನಮ್ಮಜನ ವಿಶೇಷ



ಹೊಸದುರ್ಗ: ತಾಲ್ಲೂಕಿನ ಸಾಣೇಹಳ್ಳಿ ಎಂಬ ಪುಟ್ಟ ಹಳ್ಳಿಯ ಬೃಹತ್ ಕಲ್ಲಿನ ಕಂಬಗಳ ಮಹಾದ್ವಾರ ದಾಟಿ ಒಳಗೆ ಅಡಿಯಿಡುತ್ತಲೇ ತೆಂಗು, ತೇಗ, ಬೇವು, ಆಲ, ಬಿದಿರು, ನೇರಲ, ಗಂಧ, ಹೊಂಗೆ, ಹುಣುಸೆ ಮುಂತಾದ ಹತ್ತಾರು ಗಿಡಮರಗಳ ಉದ್ಯಾನವನದ ನಡುವೆ ಮೂವತ್ತು ಅಡಿ ಎತ್ತರದ ಪರಿಸರ ಶಿಲ್ಪ, ರಾಜ್ಯದ ಇತರೆ ಶಿಲ್ಪಿಗಳು ನಿರ್ಮಿಸಿದ, ಬುದ್ಧ, ಬಸವ, ಗಾಂಧಿ, ಅಂಬೇಡ್ಕರ್ ಮುಂತಾದ ಶಿಲ್ಪಗಳೇ ಸ್ವತಃ ನಿಂತು ಕಲಾಭಿಮಾನಿಗಳನ್ನ ಎದುರುಗೊಳ್ಳುವಂತೆ ಭಾಸವಾಗುತ್ತದೆ.

ಹಾಗೇ ಕುತೂಹಲದಿಂದ ಸಿಮೆಂಟ್ ರಸ್ತೆಗುಂಟ ಬಲಬದಿಗೆ ನಾಲ್ಕೆಜ್ಜೆ ಹಾಕಿದರೆ ಕೂಡಲಸಂಗಮದಲ್ಲಿರುವ ಬಸವಣ್ಣನವರ ಐಕ್ಯಮಂಟಪದಂತಿರುವ ಮಂಟಪದಲ್ಲಿ ಸ್ವಾಮಿಗಳೊಬ್ಬರು ಕುಳಿತಿರುವುದು ಕಾಣುತ್ತದೆ. ಅವರನ್ನು ನೋಡಿದ ಯಾರೇ ಆದರೂ ಕೈಮುಗಿದು, ಕಾಲಿಗೆ ಬಿದ್ದು, ಏನಾದರೂ ಆಶೀರ್ವಾದ ಮಾಡಬಹುದೆಂದು ಕಾಯ್ದವರಿಗೆ ನಿರಾಶೆಯಾಗುತ್ತದೆ. ಇತ್ತ ಸ್ವಾಮಿಗಳನ್ನು ದಿಟ್ಟಿಸಲೂ ಆಗದೆ ಅತ್ತ ಅಲ್ಲೇ ನಿಲ್ಲಲೂ ಆಗದೆ ಕುಳಿತಿರುವ ಸ್ವಾಮಿಗಳಿಗೆ ಬೆನ್ನು ಮಾಡಿ ಬಲಕ್ಕೆ ಒಳ್ಳುತ್ತಿದ್ದಂತೆಯೇ ಇಕೋ ಆಶೀರ್ವಾದವನ್ನುವಂತೆ ಧುತ್ತೆಂದು ಗ್ರೀಕ್ ಮಾದರಿಯ ಬೃಹತ್ ಬಯಲು ರಂಗಮಂದಿರ ಪ್ರತ್ಯಕ್ಷವಾಗುತ್ತದೆ. ನೋಡಿದೊಡನೆಯೇ ಈ ಸಸ್ಯರಾಶಿಯ ನಡುವೆ ಇಷ್ಟೊಂದು ದೊಡ್ಡ ರಂಗಮಂದಿರ ಇಷ್ಟೊತ್ತು ಕಣ್ಣಿಗೆ ಕಾಣದೆ ಎಲ್ಲಿ ಅವಿತಿತ್ತೋ ಎಂದು ಅನ್ನಿಸದೇ ಇರದು.

ಶ್ರೀ ಶಿವಕುಮಾರ ಬಯಲು ರಂಗಮಂದಿರದ ಮುಖ್ಯ ವೇದಿಕೆಯು ಎರಡೂವರೆ ಅಡಿ ಎತ್ತರ ಇದ್ದು 55 ಅಡಿ ಅಗಲ, 50 ಅಡಿ ಉದ್ದವಿದೆ. ಪಕ್ಕಕ್ಕೆ ಹೊಂದಿಕೊಂಡಿರುವ ಎರಡು ಮಹಡಿಯ ಎಂಟು ಗ್ರೀನ್ ರೂಂಗಳನ್ನೂ ಸೇರಿಸಿದರೆ 115 ಅಡಿ ಉದ್ದವಾಗುತ್ತದೆ. ಒಟ್ಟು 2750 ಚದುರ ಅಡಿಯ ವೇದಿಕೆ ಎಂಥ ಸಮಾರಂಭಗಳಿಗೂ ಸೈ, ಎಂಥ ನಾಟಕ ಪ್ರದರ್ಶನಕ್ಕೂ ಸೈ. ವೇದಿಕೆಯ ಮುಂಭಾಗದಲ್ಲಿ ಮೂವತ್ತು ಅಡಿ ಎತ್ತರದ ಎರಡು ಕಂಭಗಳಿದ್ದು ವೇದಿಕೆಗೆ ಬೇಕಾದ ಲೈಟ್‌ಗಳನ್ನು ತೂಗುಹಾಕುವ ವ್ಯವಸ್ಥೆ ಮಾಡಲಾಗಿದೆ. ವೇದಿಕೆ ಮತ್ತು ಪ್ರೇಕ್ಷಕರು ಕುಳಿತುಕೊಳ್ಳುವ ಗ್ಯಾಲರಿಯ ನಡುವೆ 50ಥ20 ಅಡಿಯ ಸಮತಟ್ಟಾದ ಸ್ಥಳಾವಕಾಶವಿದ್ದು ಸುಮಾರು ಇನ್ನೂರು ಜನ ಅತಿಥಿಗಳು ಕುರ್ಚಿಯ ಮೇಲೆ ಕುಳಿತುಕೊಳ್ಳಬಹುದು. ಅಲ್ಲೇ ಬಲಬದಿಯಲ್ಲಿ ಶಿವಕುಮಾರ ಸ್ವಾಮೀಜಿ ಮಂಟಪವಿದ್ದರೆ ಎಡಬದಿಯಲ್ಲಿ ಸಿಜಿಕೆ ಸಮಾಧಿಯ ಮೇಲೆ ಸಿಜಿಕೆ ಪುತ್ಥಳಿ ಇದೆ. ಸಿಜಿಕೆ ಗೂ ಈ ನಾಟಕೋತ್ಸವಕ್ಕೂ ಅವಿನಾಭಾವ ಸಂಬಂಧವಿದೆ.

ವೇದಿಕೆಯ ಹಿಂಬದಿಯಲ್ಲಿ ದೊಡ್ಡ ಕೊಳವಿದ್ದು, ನಾಟಕದ ಸನ್ನಿವೇಶಕ್ಕೆ ತಕ್ಕಂತೆ ಬಳಸಿಕೊಂಡ ನಿದರ್ಶನವಿದೆ. ಕೊಳದ ಆಚೆಬದಿಯಲ್ಲಿ ರಂಗಶಾಲೆಯ ಸುಸಜ್ಜಿತ ಭವ್ಯ ಕಟ್ಟಡವಿದೆ. ಗ್ಯಾಲರಿಯ ಎಡಬದಿಯಲ್ಲಿ ಕ್ಯಾಂಟಿನ್ ಇದೆ. ಹಿಂಬದಿಯಲ್ಲಿ ಒಂದು ಎಕರೆಯಷ್ಟು ಎತ್ತರದ ವಿಶಾಲ ಮೈದಾನವಿದ್ದು ಇಲ್ಲೂ ತಾತ್ಕಾಲಿಕ ವೇದಿಕೆಯನ್ನು ನಿರ್ಮಿಸಿಕೊಂಡ ಉದಾಹರಣೆಗಳಿವೆ. ಒಟ್ಟಾರೆ ಸೃಜನಶೀಲ ನಿರ್ದೇಶಕನೊಬ್ಬ ಬಯಸುವ ಎಲ್ಲ ಸಾಧ್ಯತೆಗಳನ್ನು ಆಗುಮಾಡುವ ನಿಟ್ಟಿನಲ್ಲಿ ಇಡೀ ಅಂಗಳ ರಂಗಭೂಮಿಯಾಗಿ ಮಾರ್ಪಾಡಾಗಿದೆ.

ವರ್ಷವಿಡೀ ನಡೆಯುವ ರಂಗಚಟುವಟಿಕೆಗಳಿಗೆ ಇದೂ ಸಾಲದಾಗಿದೆ. ಹಾಗಾಗಿ ಈ ಬೃಹತ್ ಬಯಲು ರಂಗಮಂದಿರಕ್ಕೆ ಹೊಂದಿಕೊಂಡಂತೆ ಇರುವ ಈ ಹಳೆಯ 'ಶಿವಕುಮಾರ ರಂಗಮಂದಿರ' ಪುನರ್ ನವೀಕರಣಗೊಂಡು ಸಜ್ಜಾಗಿದೆ. ಜೊತೆಗೆ 'ಹುಣುಸೇ ಮರ'ದ ಮಿನಿ ಬಯಲ ವೇದಿಕೆ, ರಂಗಶಾಲೆಯ 'ಅಂತರಂಗ'ವೂ ಇದೆ. ಇದೇ ಅಂಗಳದಲ್ಲಿ 750 ಜನ ಕುಳಿತುಕೊಳ್ಳಬಹುದಾದ ಸುಸಜ್ಜಿತ ಒಳಾಂಗಣ ರಂಗಮಂದಿರವೊಂದು ತಲೆಯೆತ್ತಿ ನಿಂತಿದೆ.

ಹಗಲಿನಲ್ಲಿ ಒಂಟಿ ಪ್ರೇಕ್ಷಕರನ್ನು ಹೆದರಿಸುವಂತೆ ದೊಡ್ಡದಾಗಿ ಕಾಣುವ ಈ ರಂಗಮಂದಿರ ಸಂಜೆ ಕಾರ್ಯಕ್ರಮ ಶುರುವಾಗುತ್ತಿದ್ದಂತೆಯೇ ಪ್ರೇಕ್ಷಕರನ್ನು ಕುಕ್ಕರಗಾಲಿನಲ್ಲಿ ಕುಳಿತುಕೊಳ್ಳುವಂತೆ ಇಲ್ಲ ತುದಿಗಾಲಮೇಲೆ ನಿಲ್ಲುವಂತೆ ಮಾಡುವ ಮ್ಯಾಜಿಕ್ ರಂಗಮಂದಿರದಂತೆ ಭಾಸವಾಗುತ್ತದೆ. ರಾತ್ರಿಯ ಹೊತ್ತು ವಿದ್ಯುತ್ ಅಲಂಕಾರದಿಂದ ಕೂಡಿದ ಆ ವಿಶಾಲ ರಂಗಮಂದಿರವನ್ನು, ತುಂಬಿದ ಆ ಸುಸಂಸ್ಕೃತ ಪ್ರೇಕ್ಷಕರನ್ನು ಕಣ್ತುಂಬಿಕೊಳ್ಳುವುದೇ ಒಂದು ಭಾಗ್ಯ

## ಪ್ರಮುಖ ಸುದ್ದಿ

### ತಾಲ್ಲೂಕಿನಾದ್ಯಂತ ನಿರೀಕ್ಷಗೂ ಮೀರಿ ಉತ್ತಮ ಮಳೆ

# ಎಲ್ಲೆಡೆ ಹರಿಯುವ ಗಂಗೆಯ ದರ್ಶನ: ರಘುಮೂರ್ತಿ





» **ಚಳ್ಳಕೆರೆ**

ಈ ಬಾರಿ ಬಂದ ಮಳೆಯಿಂದ ಬರಗಾಲಹ ಹಣೆಪಟ್ಟಿಯಿಂದ ನಮ್ಮ ಕ್ಷೇತ್ರ ದೂರವಾಗಿದೆ. ಸಮೃದ್ಧಿ ಮಳೆಯಿಂದ ಜನರು, ಜಾನುವಾರುಗಳಿಗೆ ಮೇವು ನೀರಿನ ಕೊರತೆ ನೀಗಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಅಜ್ಜಯ್ಯನಗುಡಿ ಕೆರೆ ತುಂಬಿಕೋಡಿಬಿದ್ದ ಹಿನ್ನೆಲೆಯಲ್ಲಿ ಬಾಗಿನ ಅರ್ಪಿಸಿ ಮಾತನಾಡಿದರು.

ನಗರ ಪ್ರದೇಶ ವ್ಯಾಪ್ತಿಯ ಅಜ್ಜಯ್ಯಗುಡಿಕೆರೆಗೂ ಸಹ ಬಾಗಿನ ಅರ್ಪಿಸುವ ಪುಣ್ಯದೊರಕಿದ್ದು ನನಗೆ ಹೆಚ್ಚು ಸಂತಸ ತಂದಿದೆ. ಪ್ರಸ್ತುತ ವರ್ಷ ತಾಲ್ಲೂಕಿನಾದ್ಯಂತ ಗ್ರಾಮ ದೇವತೆ ಚಳ್ಳಕೆರೆಯಮ್ಮ, ಶ್ರೀಜಗಲೂರಜ್ಜಸ್ವಾಮಿ, ವೀರಭದ್ರಸ್ವಾಮಿ, ಉಡಲಸಮ್ಮ ಸೇರಿದಂತೆ ಎಲ್ಲಾ ದೇವರುಗಳ ಕೃಪೆಯಿಂದ ನಿರೀಕ್ಷೆಗೂ ಮೀರಿ ಉತ್ತಮ ಹದ ಮಳೆಯಾಗಿದೆ. ಕೇವಲ ಎರಡು ತಿಂಗಳ ಅವಧಿಯಲ್ಲಿ ಸಾವಿರಕ್ಕೂ ಹೆಚ್ಚು ಎಂ.ಎಂ.ಮಳೆಯಾಗಿದ್ದು, ಎಲ್ಲೆಡೆ ಕೆರೆಗಳು ತುಂಬಿ ಕೋಡಿಬಿದ್ದಿವೆ. ತಾಲ್ಲೂಕಿನಾದ್ಯಂತ ಗಂಗಾದೇವತೆ ದರ್ಶನವಾಗುತ್ತಿದೆ. ಅಜ್ಜಯ್ಯನಗುಡಿ ಕೆರೆಯೂ ಸಹ ಕೋಡಬಿದ್ದಿದ್ದು, ಬಾಗಿನ ಅರ್ಪಿಸಿ, ಗಂಗಾಪೂಜೆ ನೆರವೇರಿಸಿ ಮುಂದಿನ ದಿನಗಳಲ್ಲೂ ಇದೇ ರೀತಿ ಕರುಣೆ ತೋರುವಂತೆ ದೇವರನ್ನು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ,ಎಂ.ಜೆ.ರಾಘವೇಂದ್ರ, ಸುಮಭರಮಣ್ಣ, ಕವಿತಾಬೋರಯ್ಯ, ಮಲ್ಲಿಕಾರ್ಜುನ್, ನಾಮಿನಿ ಸದಸ್ಯರಾದ ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ಆರ್.ವೀರಭದ್ರಿ, ಕೆಡಿಪಿ ಸದಸ್ಯ ಸುರೇಶ್, ಮುಖಂಡರಾದ ಸಿ.ಟಿ.ಶ್ರೀನಿವಾಸ್, ಬೋರಯ್ಯ, ಭರಮಣ್ಣ, ವ್ಯವಸ್ಥಾಪಕ ಲಿಂಗರಾಜು, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಗೀತಾಕುಮಾರಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಇಂದಿನ ಸುದ್ದಿ ಪತ್ರಿಕೆಯ ಗೌ. ಸಂಪಾದಕ ವೀರಪ್ಪ ಎಂ.ಬಾವಿ ನಿಧನ

» ದಾವಣಗೆರೆ

ದಾವಣಗೆರೆ ದೇವರಾಜ್ ಅರಸು ಬಡಾವಣೆ ನಿವಾಸಿ ಹಾಗೂ ಇಂದಿನ ಸುದ್ದಿ ಪತ್ರಿಕೆ ಸಂಪಾದಕ ವೀರಪ್ಪ ಎಂ.ಭಾವಿ (63) ಅವರು 02-11-2024 ರಂದು ಶನಿವಾರ ರಾತ್ರಿ 2:50ಕ್ಕೆ ನಿಧನರಾದರು. ಅವರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂದು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು 03-11-2024ರ ಭಾನುವಾರ ಸಂಜೆ 4 ಗಂಟೆಗೆ ನಗರದ ವೀರಶೈವ ರುದ್ರಭೂಮಿಯಲ್ಲಿ ನೆರವೇರಿತು.

ವೀರಪ್ಪ ಭಾವಿ ಅವರು ಕಳೆದ 45 ವರ್ಷಗಳಿಂದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು. 18 ವರ್ಷಗಳಿಂದ ಇಂದಿನ ಸುದ್ದಿ ಪತ್ರಿಕೆ ಸಂಪಾದಕರಾಗಿ, ದಾವಣಗೆರೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ, ವಿವಿಧ ಸಂಘ ಸಂಸ್ಥೆಗಳ ಸಂಚಾಲಕರಾಗಿ ವೀರೇಶ್ವರ ಮಠದ ಸಂಯೋಜಕರಾಗಿ ಕೆಲಸ ಮಾಡಿದ್ದಾರೆ. ಪತ್ರಿಕೋದ್ಯಮದ ಜೊತೆ ಸಮಾಜ ಸೇವೆ, ಶಿಕ್ಷಣ, ಆರೋಗ್ಯ ಸೇವಾ ಕ್ಷೇತ್ರಗಳಲ್ಲೂ ತಮ್ಮನ್ನು ತೊಡಗಿಸಿಕೊಂಡಿದ್ದರು. ಜನಾನುರಾಗಿ ಮನೋಭಾವ ವೀರಪ್ಪ ಅವರ ಮನಸ್ಸು ಸುಸ್ಥಿರ, ಸುಂದರ ಸಮಾಜಕ್ಕಾಗಿ ತುಡಿಯುತ್ತಿತ್ತು.

**ಸಂತಾಪ:** ಹಿರಿಯ ಪತ್ರಕರ್ತರಾದ ವೀರಪ್ಪ ಎಂ ಬಾವಿಯವರು ನಿಧನಕ್ಕೆ ಶಾಸಕರು,ಸಚಿವರು, ಸಂಸದರು,ಜಿಲ್ಲ ವರದಿಗಾರರ ಕೂಟ, ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಕಸಾಪ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ.

### ಛಾಯಾಗ್ರಾಹಕ ಮನುಗೆ ರಾಜ್ಯೋತ್ಸವ ಪ್ರಶಸ್ತಿ



» ದಾವಣಗೆರೆ

ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ನಾಡು-ನುಡಿಗಾಗಿ ಸೇವೆ ಸಲ್ಲಿಸಿರುವ ವಿವಿಧ ಕ್ಷೇತ್ರಗಳ ಸಾಧಕರಿಗೆ ಜಿಲ್ಲಾಡಳಿತ ವತಿಯಿಂದ ಸನ್ಮಾನಿಸಿ ಗೌರವಿಸಲಾಗಿದ್ದು, 'ಸಂಕೀರ್ಣ' ವಿಭಾಗದಿಂದ ಕನ್ನಡಪರ ಹೋರಾಟಗಾರರು, ತಾಲ್ಲೂಕು ಫೋಟೋ ಹಾಗೂ ವೀಡಿಯೋ ಗ್ರಾಫರ್ಸ್ ಸಂಘದ ಅಧ್ಯಕ್ಷರು, ಅಖಿಲ ಕರ್ನಾಟಕ ರವಿಚಂದ್ರನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷರು ಆಗಿರುವ ಎಂ. ಮನು ಅವರನ್ನು ಪುರಸ್ಕರಿಸಲಾಯಿತು.ಮನು ಅವರ ಸಮಾಜ ಸೇವೆ, ಕನ್ನಡಪರ ಹೋರಾಟ, ಹಾಗೂ 28 ವರ್ಷಗಳಿಂದ ಛಾಯಾಗ್ರಹಣ( ಫೋಟೋಗ್ರಫಿ) ಕ್ಷೇತ್ರದ ಸೇವೆಯನ್ನು ಗುರುತಿಸಿ ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಬೆಳಗ್ಗೆ ಗಣಿ ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಆದ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಪ್ರಭಾ ಮಲ್ಲಿಕಾರ್ಜುನ್ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಿದರು.ಈ ಸಂದರ್ಭದಲ್ಲಿ ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ಜಿಲ್ಲಾಧಿಕಾರಿ ಗಂಗಾಧರ್ ಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಪಾಲಿಕೆಯ ಮಹಾಪೌರರಾದ ಕೆ. ಚಮನ್ ಸಾಬ್, ಉಪ ಮಹಾಪೌರರಾದ ಸೋಗಿ ಶಾಂತಕುಮಾರ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

### ಎಲ್ಲೆಡೆ ಗಂಗಾಮಾತೆಯ ದರ್ಶನ: ಸಾರ್ವಜನಿಕರಿಗೆ ನೆಮ್ಮದಿಯ ಜೀವನ



» ಮೊದಲ ಪುಟದಿಂದ

ಕೆಲವೊಂದು ಗ್ರಾಮಗಳ ಕೆರೆಗಳು ನೀರಿನಲ್ಲದೆ ಬಿರುಕು ಬಿಟ್ಟಿದ್ದವು, ಆದರೆ, ಇಂದಿನ ಚಿತ್ರಣವೇ ಪೂರ್ಣಬದಲಾಗಿದೆ. ಪ್ರತಿಯೊಂದು ಕೆರೆಯಲ್ಲೂ ತುಂಬಿರುವ ಗಂಗೆಯ ದರ್ಶನವಾಗುತ್ತದೆ. ಸದಾಕಾಲ ಇದೇ ಸ್ಥಿತಿ ಇರಲಿ ಎಂದು ದೇವರನ್ನು ಪ್ರಾರ್ಥಿಸುದಾಗಿ ತಿಳಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಜಿ.ಬಾಲರಾಜು, ವಾಲ್ಮೀಕಿ ಸಮಾಜದ ಮುಖಂಡ ತಿಪ್ಪೇಸ್ವಾಮಿ(ಗೌಡ), ಗ್ಯಾರಂಟಿ ಸಮಿತಿ ಸದಸ್ಯ ಬೋರಯ್ಯ, ಗುತ್ತಿಗೆದಾರ ಎಚ್.ತಿಪ್ಪೇಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯರಾದ ಡಿ.ಒ.ಲಕ್ಷ್ಮಿದೇವಿ ಮುಂತಾದವರು ಉಪಸ್ಥಿತರಿದ್ದರು.

# ವೈಶಿಷ್ಟ್ಯ ಜನಪದರ ಬೆಳಕಿನ ಹಬ್ಬದ ಸೊಗಡು

» ಮಹದೇವಪುರ ಶಿವಮೂರ್ತಿ.





ಪರಶುರಾಂಪುರ: ಹೋಬಳಿಯಾದ್ಯಂತ ವಿವಿಧ ಗ್ರಾಮಗಳಲ್ಲಿ ದೀಪಾವಳಿ ಹಬ್ಬವನ್ನ ಸಂಪ್ರದಾಯದಂತೆ ವೈಶಿಷ್ಟ್ಯಪೂರ್ಣವಾಗಿ ಆಚರಿಸಿದರು.

ಹಬ್ಬಕ್ಕೂ ಮೊದಲು ಮನೆಯ ಹೊಸ್ತಿಲಿಗೆ ನಿಗದಿತ ಕುಟುಂಬದ ವ್ಯಕ್ತಿಯೋರ್ವ ತಂಗಟೆ ಹೂವನ್ನು ಪ್ರತಿ ಮನೆಯ ಹೊಸ್ತಿಲಿಗೆ ಹಾಕಿ ಮನೆ ಮಾಲೀಕನಿಂದ ಹಬ್ಬಕ್ಕೆ ಧವಸ, ಧಾನ್ಯ ಪಡೆದರು. ಮನೆ ಹೊಸ್ತಲಿಗೆ ತಂಗಟೆ ಹೂವು ಹಾಕುವುದರಿಂದ ಕುಟುಂಬ ಸದಸ್ಯರಿಗೆ ಶುಭವಾಗಲಿದೆ ಎಂಬ ನಂಬಿಕೆ ಇಂದಿಗೂ ಗ್ರಾಮಸ್ಥರಲ್ಲಿರುವುದು ಆಚರಣೆ ಹಿಂದಿನ ವಿಶೇಷ.

ಇನ್ನೂ ಕೆಲವು ಕಡೆ ಅಮಾವಾಸ್ಯೆಯಿಂದ ಒಂಬತ್ತು ದಿನ ಇಲ್ಲವೇ ಹುಣ್ಣಿಮೆಯ ದಿನದಲ್ಲಿ ಎತ್ತಿನ ಹಬ್ಬ ಆಚರಣೆ ಮಾಡಲಾಗುವುದು ಹಿರಿಯರು ಹೇಳುತ್ತಾರೆ.

ದೇವಸ್ಥಾನಗಳಿಗೆ ಹೋಗಿ ಪೂಜೆ ಸಲ್ಲಿಸುವುದರ ಜತೆ ಅಂಗಡಿ ಮುಂಗಟ್ಟುಗಳಿಗೆ ತಳಿರು ತೋರಣ, ಹೂಗಳಿಂದ ಅಲಂಕಾರ ಮಾಡಿ ಪೂಜೆ ಮಾಡಿ ಆರಾಧಿಸುತ್ತಿರುವುದು ಕಂಡು ಬಂದಿತು. ಬಹುತೇಕ ಅಂಗಡಿಗಳಲ್ಲಿ ಗ್ರಾಹಕರಿಗೆ ಅಂಗಡಿ ಮಾಲೀಕರು ಸಿಹಿ ಹಂಚಿದರು.ಹಳ್ಳಿಗಳಲ್ಲಿ ಹಬ್ಬ ಚಂದ ಎಂಬ ಜನಪದರ ನುಡಿಯಂತೆ ದೀಪಾವಳಿಯನ್ನು ತಮ್ಮದೇ ಸೊಗಡಿನೊಂದಿಗೆ ಆಚರಿಸುತ್ತಿದ್ದುದು ಕಂಡು ಬಂದಿತು.ರಾತ್ರಿ ಆಗುವುದನ್ನು ಕಾತರದಿಂದ ಕಾಯುತ್ತಿದ್ದ ಅನೇಕ ಮಂದಿ ಕತ್ತಲು ಆವರಿಸುತ್ತಿದ್ದಂತೆ ಮನೆಯಂಗಳದಲ್ಲಿ ಪುಟ್ಟ ಹಣತೆಗಳನ್ನು ಸಾಲು ಸಾಲಾಗಿ ಹಚ್ಚಿದರು. ಬೆಳಕಿನ ಹಬ್ಬ ದೀಪಾವಳಿಯಲ್ಲಿ ಎತ್ತ ನೋಡಿದರತ್ತ ದೀಪಗಳೇ ಮಿನುಗತೊಡಗಿದವು. 'ಹಸಿರು ಪಟಾಕಿ'ಗಳಿಗೆ ಮಾತ್ರ ಅನುಮತಿ ನೀಡಿದ್ದರಿಂದ ಈ ಬಾರಿ ಹೆಚ್ಚು ಶಬ್ದ ಮಾಡುವಂಥ ಪಟಾಕಿಗಳನ್ನೂ ಹಲವರು ಹಚ್ಚಲಿಲ್ಲ.

ಬಾನು ಕೆಂಪೇರುತ್ತಿದ್ದಂತೆ ಮಕ್ಕಳು ಪಟಾಕಿಗಳನ್ನು ಹಚ್ಚಲು ಉತ್ಸುಕರಾದರು. ಮನೆಯ ಮುಂಭಾಗ, ಖಾಲಿ ಜಾಗಗಳಲ್ಲಿ ಸುರ್ ಸುರ್ ಬತ್ತಿ, ಮಸಿ ಕುಡಿಕೆ, ಭೂಚಕ್ರ ಹಚ್ಚಿ ಸಂಭ್ರಮಿಸಿದರು. ವಿವಿಧ ಬಗೆಯ ಪಟಾಕಿಗಳು ಕತ್ತಲೆಯಲ್ಲಿ ಬೆಳಕಿನ ಚಿತ್ತಾರ ಮೂಡಿಸಿದವು. ಕತ್ತಲಿನಿಂದ ಬೆಳಕಿನೆಡೆಗೆ ಕೊಂಡೊಯ್ಯುವ ದೀಪಾವಳಿ ಹಬ್ಬವನ್ನು ಜಿಲ್ಲೆಯ ಜನತೆ ಆಚರಿಸಿದ ಪರಿ ಇದು.

ಹೊಸ ಬಾಳಿಗೆ ಹೊಸ ಅಧ್ಯಾಯದಂತೆ ಪ್ರತಿಯೊಂದರಲ್ಲಿಯೂ ಹೊಸತನವನ್ನು ಹಾಗೂ ಸುಖಕರ ಜೀವನವನ್ನು ನಡೆಸಲು ಮುನ್ನಡಿಯನ್ನು ಈ ಹಬ್ಬದ ಮೂಲಕ ಇಡುತ್ತಾರೆ.ಹಬ್ಬದ ದಿನದಂದು ಪ್ರತಿಯೊಬ್ಬರ ಮನೆಗಳಿಗೆ ತೆರಳಿ ಬಾಳು ಬಂಗಾರವಾಗಲಿ ಎಂದು ತಂಗಡಿ



ಹೂವನ್ನು ನೀಡಿ ಹಾರೈಸುತ್ತಾರೆ.

ದೀಪಾವಳಿ (ದೀವಣಿಗೆ) ಹಬ್ಬ: ರೈತ ಮಕ್ಕಳು ವರ್ಷದ ಮುಂಗಾರಿನಿಂದ ದುಡಿದ ಎತ್ತುಗಳಿಗೆ ಪೂಜಿಸುವ ಹಬ್ಬವೆ ದೀವಣಿಗೆ ಸಂಭ್ರಮ. ತಮ್ಮ ದನಕರುಗಳನ್ನ ಮೈತೊಳೆದು ಕೊಂಬುಗಳಿಗೆ ಬಣ್ಣ ಹಚ್ಚಿ ಕೋಡ ಹಣಸು , ಟೇಪು ತೊಡಿಸಿ, ಮೈತುಂಬಾ ಬಣ್ಣದ ವಸ್ತ್ರ ಹಾಗು ಜೂಲು , ಅಂದವಾಗಿ ಕಾಣಲು ಮುಖಪುಟ ಗುಮ್ಮಟಗಳನ್ನು ಇರಿಸಿ, ಬಲೂನುಗಳ ಕುಚ್ಚುಗಳು , ಕಾಲಿಗೆ ಗೆಜ್ಜೆ , ಚೆಂಡು ಹೂವಿನ ಹಾರಗಳಿಂದ ಸಿಂಗರಿಸಿ ಹರೆ,ಡೋಲು,ತಮಟೆ ಮುಂದಾದ ವಾದ್ಯಗಳ ಸಹಿತ ಶೃಂಗಾರ ಹೊರಡುವ ಗೆಣಕಾರನ ಬಣ್ಣಿಸುವ ಜನಪದ ಹಾಡುಗಳನ್ನು ಆರತಿ ಹಿಡಿದ ಮಹಿಳೆಯರು ಹಾಡಿ ಓಕಳಿ ನೀವಳಿಸಿ ಮೆರವಣಿಗೆ ನಂತರ ಮನೆ ತುಂಬಿಸಿ ಕೋಳ್ಳುವ ಗ್ರಾಮೀಣ ಸೊಗಡು ಕಾಣುತ್ತೇವೆ.

**ದೀಪಾವಳಿಯ ಮಹತ್ವ** . ಹಿಂಧೂ ಧರ್ಮದಲ್ಲಿ ಅಶ್ವಯುಜ ಮಾಸ,ಕೃಷ್ಣ ಪಕ್ಷದ ಚತುರ್ಥಿ,ಅಮಾವಾಸ್ಯೆ ಮತ್ತು ಕಾರ್ತಿಕ ಮಾಸ ಶುಕ್ಲಪಕ್ಷ ಪಾಡ್ಯ ದಿನಗಳಲ್ಲಿ ದೀಪಾವಳಿಯನ್ನ ಆಕ್ಟೋಬರ್ ಇಲ್ಲವೇ ನವೆಂಬರ್ ತಿಂಗಳಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತದೆ . ಪೌರಣಿಕವಾಗಿ ಶ್ರೀರಾಮ ರಾವಣನನ್ನು ಗೆದ್ದು ಸೀತೆ ಮತ್ತು ಸಹೋದರ ಲಕ್ಷ್ಮಣರೊಂದಿಗೆ ಅಯೋಧ್ಯೆಗೆ ಆಗಮಿಸಿದ ಸನ್ನಿವೇಶ ಹಿನ್ನೆಲೆ ಹಾಗು ಅಮವಾಸೆ ಹಿಂದಿನ ದಿನ ಶ್ರೀಕೃಷ್ಣ ನರಕಾಸುರನ ಸಂಹರಿಸಿದ ದಿನವನ್ನ ಆಧಾರವಾಗಿಟ್ಟುಕೊಂಡು ದೀಪಾವಳಿ ಆಚರಿಸಲಾಗುತ್ತದೆ .ಸಿಖ್ ಧರ್ಮದಲ್ಲಿ ಗುರು ಪರಗೋವಿಂದಸಿಂಗ್ ಅವರು ಗ್ವಾಲಿಯರ್ ಕೋಟೆಯಲ್ಲಿ ಬಂಧಿತವಾಗಿದ್ದ ಐವತ್ತೇರಡು ರಾಜನ್ನ ಬಿಡಿಗಡೆ ಮಾಡಿಸಿದ ದಿನದಂದು,ಜೈನ ಧರ್ಮದಲ್ಲಿ ಕೊನೆಯ ತಿರ್ಥಂಕರ ಮಹಾವೀರ ಕಾರ್ತಿಕ ಚತುರ್ದಶಿಯಂದು ಮೋಕ್ಷ ಹೊಂದಿದ ದಿನದ ಪ್ರಯುಕ್ತ ದೇಶದ ನಾನ ಕಡೆಗಳಲ್ಲಿ ಹಲವು ರೀತಿಯಲ್ಲಿ ದೀಪಾವಳಿ ಆಚರಿಸಲಾಗುತ್ತಿದೆ .

# ಗೋಪನಹಳ್ಳಿ: ದೀಪಾವಳಿ ಹಿನ್ನೆಲೆ ಎತ್ತುಗಳ ದೀವಣಿ ಹಬ್ಬ ನೂರಾರು ಎತ್ತುಗಳು ಬಾಗಿ

» ಚಳ್ಳಕೆರೆ

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಎತ್ತುಗಳ ಕಿಚ್ಚುಹಾಕಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಗ್ರಾಮದ ನೂರಾರು ಜೋಡಿ ಎತ್ತುಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡವು.


ಪ್ರತಿವರ್ಷದಂತೆ ಈ ವರ್ಷವೂ ಬಲಿಪಾಡ್ಯಮಿ ದಿನದಂದು ಎತ್ತುಗಳನ್ನು ಭವ್ಯವಾಗಿ ಸಿಂಗರಿಸಿ ಗ್ರಾಮದ ಎಲ್ಲಾ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ಕೆರೆತರಲಾಗುವುದು. ಪ್ರತಿಜೋಡಿ ಎತ್ತುಗಳಿಗೆ ವಿಶೇಷ ಅಲಂಕಾರವನ್ನು ಮಾಡಲಾಗುತ್ತದೆ. ದೀವಣಿಗೆ ಹಬ್ಬವೆಂದು ಸಹ ಇದನ್ನು ಕರೆಯಲಾಗುತ್ತದೆ. ಗ್ರಾಮದ ದೇವಸ್ಥಾನದ ಮುಂದೆ ಎಲ್ಲಾ ಎತ್ತುಗಳನ್ನು ಒಂದೆಡೆ ಸೇರಿಸಿ ವಾಡಿಕೆಯಂತೆ ಗ್ರಾಮದ 9 ಆಯಗಾರರು ಕಳ್ಳೆ, ಮುಳ್ಳಿನಿಂದ ತಯಾರಿಸಿದ ಈಡು(ಕಿಚ್ಚು) ಸಿದ್ದಪಡಿಸಲಾಗುತ್ತದೆ. ಸಂಜೆ ವೇಳೆ ಪೂಜೆ ಸಲ್ಲಿಸಿ ಅಗ್ನಿಸ್ಪರ್ಶ ಮಾಡಲಾಗುತ್ತದೆ. ಎಲ್ಲಾ ಎತ್ತುಗಳು ಅದನ್ನು ದಾಟಿ ಸಾಗಿದರೆ ಯಾವುದೇ ರೋಗರುಜಿನೆ ಬಾರದು ಎಂಬ ನಂಬಿಕೆಯಿಂದ



ಈ ಕಾರ್ಯಕ್ರಮವನ್ನು ಪ್ರತಿವರ್ಷ ಆಯೋಜಿಸಲಾಗುತ್ತದೆ ಎಂದು ಗ್ರಾಮದ ಹಿರಿಯರು ತಿಳಿಸಿದ್ದಾರೆ.

ಸಿಂಗರಿಸಿದ ಎತುಗಳ ಜೋಡಿಯನ್ನು ನೋಡಲು ಗ್ರಾಮದ ರಸ್ತೆಯ ಎರಡೂ ಬದಿಗಳಲ್ಲಿ ಸಾರ್ವಜನಿಕರು ಸಾಲಾಗಿ ನಿಂತಿರುತ್ತಾರೆ. ಪಟಾಕಿಗಳನ್ನು ಸಿಡಿಸಿ ಸಂಭ್ರಮಿಸಲಾಗುತ್ತದೆ. ಕೆಲವೊಮ್ಮೆ ಜನರ ಹರ್ಷೋದ್ಗಾರದಿಂದ ಎತ್ತುಗಳು ಗಾಬರಿಗೊಳ್ಳುವ ಸಂದರ್ಭವೂ ಇರುತ್ತದೆ. ಹಾಗಾಗಿ ಎತ್ತುಗಳ ಮಾಲೀಕರು ಎತ್ತುಗಳು ಎಲ್ಲೂ ಹಾಯದಂತೆ ಬಿಗಿಯಾಗಿ ಹಿಡಿದು ಸಾಗುತ್ತಾರೆ.

## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



» ಚಿತ್ರದುರ್ಗ

ಈ ದಿನ ಕನ್ನಡಿಗರ ಪಾಲಿಗೆ ವಿಶೇಷ ದಿನ. ವಿವಿಧ ಪ್ರಾಂತ್ಯಗಳಲ್ಲಿ ಹರಿದು ಹಂಚಿಹೋಗಿದ್ದ ಕನ್ನಡಿಗರು ಕನ್ನಡವೆಂಬ ಕರುಳಬಳ್ಳಿಯ ಮೂಲಕ ಒಗ್ಗೂಡಿದ ಪವಿತ್ರ ದಿನವಿದು. ಇಂತಹದ್ದೊಂದು ಕನ್ನಡದ ಕನಸು ಸಾಕಾರಗೊಳ್ಳಲು ನಿಸ್ವಾರ್ಥದಿಂದ ಶ್ರಮಿಸಿದ ಲಕ್ಷಾಂತರ ಕನ್ನಡಾಭಿಮಾನಿಗಳ ಶ್ರಮ, ತ್ಯಾಗ, ಬಲಿದಾನಗಳನ್ನು ನಾವೆಲ್ಲರೂ ಗೌರವದಿಂದ ಸ್ಮರಿಸೋಣ ಎಂದು ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್ ತಿಳಿಸಿದರು.

ಚಿತ್ರದುರ್ಗ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಇಂದು 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಕನ್ನಡಾಂಬೆಯ ಬಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, 1973 ರ ನವೆಂಬರ್ 1 ರಂದು ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿ ಇಂದಿಗೆ 50 ವಸಂತಗಳು ಸಂದಿವೆ. ಕರ್ನಾಟಕದ ಸುವರ್ಣ ಮಹೋತ್ಸವದ ಈ ಸಂದರ್ಭದಲ್ಲಿ ಕನ್ನಡ ನಾಡಭಾಷೆಯಷ್ಟೇ ಆಗದೆ ನಾಡಿನ ಪ್ರತಿ ಮನೆಯ ಆಡು ಭಾಷೆಯಾಗಲಿ, ಈ ದಿನ ಕನ್ನಡಿಗರ ಪಾಲಿನ ನಿತ್ಯೋತ್ಸವವಾಗಬೇಕಿದೆ. ಹೆಸರಾಯಿತು ಕರ್ನಾಟಕ ಎಲ್ಲರ ಉಸಿರಾಗಲಿ ಕನ್ನಡವಾಗಬೇಕಿದೆ ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದಶಿ ಸಂಪತ್ ಕುಮಾರ್, ಮೈಲಾರಪ್ಪ, ಗ್ಯಾರೆಂಟಿ ಯೋಜನೆಯ ಅಧ್ಯಕ್ಷರಾದ ಶಿವಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.



**ಹರಿಹರ ಇಲ್ಲಿನ ವಿದ್ಯಾನಗರದಲ್ಲಿರುವ ಐರಣಿ ಮಠದ ಆವರಣದಲ್ಲಿ ಭಾನುವಾರ ನೂತನವಾಗಿ ಸ್ಪೂರ್ತಿ ಟೆಕ್ವಾಂಡೋ ಅಕಾಡೆಮಿಯನ್ನು ಸಂಸ್ಥಾಪಕಿ ಎಂ. ರೂಪಾ ಅವರು ಉದ್ಘಾಟಿಸಿದರು. ಈ ವೇಳೆ ಸಂಸ್ಥೆಯ ಅಧ್ಯಕ್ಷ ಸಿ.ಎನ್. ಹುಲಿಗೇಶ್, ಉಪಾಧ್ಯಕ್ಷ ಸಿ. ಶ್ರೀನಿವಾಸ್, ಖಜಾಂಚಿ ಹೆಚ್. ಅಭಿಲಾಷ್, ತರಬೇತಿದಾರ ಎಂ. ನಾಗರಾಜ್, ಪಾಲಕರಾದ ತಿಮ್ಮಯ್ಯ ಶೆಟ್ರು, ಅವಿನಾಶ್ ಮತ್ತಿತರರಿದ್ದರು.**

## ಪ್ರಮುಖ ಸುದ್ದಿ

# ಟಾಕ್ಸಿಕ್ ಚಿತ್ರೀಕರಣ ಸ್ಥಗಿತಗೊಳಿಸುವಂತೆ ಪರಿಸರ ಸಂರಕ್ಷಣಾ ವೇದಿಕೆ ಆಗ್ರಹ

» ಚಿತ್ರದುರ್ಗ

ಎಚ್‌ಎಂಟಿ ಅನುಭೋಗದಲ್ಲಿರುವ ಅರಣ್ಯ ಭೂಮಿಯಲ್ಲಿ ಯಶ್ ಅಭಿನಯದ "ಟಾಕ್ಸಿಕ್" ಎಂಬ ಸಿನಿಮಾ ಚಿತ್ರೀಕರಣ ನಡೆದಿದ್ದು, ಇದಕ್ಕಾಗಿ ಸಾವಿರಾರು ಗಿಡ-ಮರಗಳನ್ನು ಕಡಿಯಲಾಗಿದೆ. ಕೂಡಲೇ ಟಾಕ್ಸಿಕ್ ಚಿತ್ರೀಕರಣ ಸ್ಥಗಿತಗೊಳಿಸುವಂತೆ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಸರ್ಕಾರವನ್ನು ಆಗ್ರಹಿಸಿದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಎಸ್.ಟಿ.ನವೀನ್ ಕುಮಾರ್, ಇದಕ್ಕೆ ಅನುಮತಿ ನೀಡಿದ ಅಧಿಕಾರಿ ಅಥವಾ ಅನುಮತಿ ಪಡೆಯದೆ ಮರ ಕಡಿದ ಚಿತ್ರತಂಡದ ವಿರುದ್ಧ ಅರಣ್ಯ ಅಪರಾಧ ಪ್ರಕರಣ ದಾಖಲಿಸುವಂತೆ ಅಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚಿಸಿರುವುದನ್ನು ಸ್ವಾಗತಿಸಿದ್ದು ಪರಿಸರ ಹಾನಿ ಮಾಡಿ ಸಾವಿರಾರು ವನ್ಯಜೀವಿಗಳ ಆಶ್ರಯ ಕಸಿದ ಕಾರಣ ಸಿನಿಮಾ ನಿರ್ಮಾಪಕ ಮತ್ತು ನಿರ್ದೇಶಕನ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕೆಂದು ಪರಿಸರ ಮತ್ತು



ವನ್ಯಜೀವಿ ಸಂರಕ್ಷಣಾ ವೇದಿಕೆ ಆಗ್ರಹಿಸಿದೆ. ಕೆನರಾ ಬ್ಯಾಂಕ್‌ಗೆ ಮಾರಾಟ ಮಾಡಿದೆ ಎನ್ನಲಾದ ಅರಣ್ಯ ಭೂಮಿಯಲ್ಲಿ ಹಲವು ತಿಂಗಳಿಂದ "ಟಾಕ್ಸಿಕ್" ಎಂಬ ಹೆಸರಿನ ಚಲನಚಿತ್ರದ ಚಿತ್ರೀಕರಣ ನಡೆಯುತ್ತಿದ್ದು, ಇದಕ್ಕಾಗಿ ಸಾವಿರಾರು ಗಿಡ-ಮರಗಳನ್ನು ಕಡಿದು ಸೆಟ್ ಹಾಕಲಾಗಿದೆ. ಇದಕ್ಕೆ ಅನುಮತಿ ನೀಡಿದ್ದರೆ, ಆ ಅಧಿಕಾರಿ ವಿರುದ್ಧ ಕ್ರಮ ಆಗಬೇಕು. ಅನುಮತಿ ಪಡೆಯದೆ ಗಿಡ-ಮರಗಳನ್ನು ಕಡಿದಿದ್ದರೆ, ಚಿತ್ರತಂಡದ ವಿರುದ್ಧ ಸೇರಿದಂತೆ ಕಾರಣರಾದ ಎಲ್ಲರ ವಿರುದ್ಧವೂ ಅರಣ್ಯ ಅಪರಾಧ ಪ್ರಕರಣ ದಾಖಲಿಸಲು ಸೂಚಿಸಿರುವುದಾಗಿ ಸಚಿವರಿಗೆ ಆಗ್ರಹಿಸಿದರು.

ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯ ಸಂಚಾಲಕರಾದ ಟಿ.ರುದ್ರಮುನಿ ಮಾತನಡಿ, ಎಚ್‌ಎಂಟಿ ಅನುಭೋಗದಲ್ಲಿರುವ ಜಾಗವು ಅರಣ್ಯ ಇಲಾಖೆಗೇ ಸೇರಿದ್ದು. ತನ್ನ ಸ್ವಾಧೀನದಲ್ಲಿರುವ ಈ ಭೂಮಿಯನ್ನು ವಿವಿಧ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಿಗೆ ಹಾಗೂ ವ್ಯಕ್ತಿಗಳಿಗೆ ಅಕ್ರಮವಾಗಿ ಮಾರಾಟ ಮಾಡಲಾಗಿದೆ. ಅರಣ್ಯೇತರ ಚಟುವಟಿಕೆಗಳೂ ನಡೆಯುತ್ತಿವೆ.ಈ ಪ್ರದೇಶದಲ್ಲಿದ್ದ ಮರ-ಗಿಡಗಳನ್ನು ಕಡಿದಿರುವುದು ಉಪಗ್ರಹ ಆಧಾರಿತ ಚಿತ್ರದಿಂದ ಗೋಚರಿಸುತ್ತದೆ. ಸಾಲದ್ದಕ್ಕೆ ತನ್ನ ಸುಪರ್ದಿಯಲ್ಲಿದ್ದ ಅರಣ್ಯ ಭೂಮಿ ಹಾಗೂ ಖಾಲಿ ಜಾಗಗಳನ್ನು ಸಿನಿಮಾ ಚಿತ್ರೀಕರಣಕ್ಕೆ ದಿನದ ಆಧಾರದ ಮೇಲೆ ಬಾಡಿಗೆಗೆ ನೀಡುತ್ತಿರುವುದೂ ಗಮನಕ್ಕೆ ಬಂದಿದೆ ಅರಣ್ಯದಲ್ಲಿ ನೂರಾರು ಮರಗಳ ಕಡಿದು ಟಾಕ್ಸಿಕ್ ಸಿನಿಮಾ ಶೂಟಿಂಗ್ ಮಾಡಲಾಗಿದೆ. ಈ ಪ್ರದೇಶಕ್ಕೆ ಸ್ವತಃ ಅರಣ್ಯ ಸಚಿವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಅರಣ್ಯ ಭಾಗಕ್ಕೆ ಹಾನಿಯಾಗಿರುವುದು ತಿಳಿದುಬಂದಿದೆ. ಈ ಬಗ್ಗೆ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಅರಣ್ಯ ಇಲಾಖೆ ನಿರ್ಧರಿಸಿದೆ. ಅರಣ್ಯ ಸಚಿವ ಖಂಡ್ರೆ ಈ ಬಗ್ಗೆ ಮಾಹಿತಿ ನೀಡಿದ್ದಾರೆ.ಟಾಕ್ಸಿಕ್ ಸಿನಿಮಾ ಚಿತ್ರೀಕರಣದ ವೇಳೆ ನೂರಾರು ಮರಗಳನ್ನು ಅಕ್ರಮವಾಗಿ ಕಡಿದು ಹಾಕಿರುವ ಕೃತ್ಯವು ಸ್ಯಾಟೆಲೈಟ್ ಚಿತ್ರಗಳಿಂದ ಬಯಲಾಗಿದೆ. ಕೂಡಲೇ ಸಿನಿಮಾ ನಿರ್ಮಾಪಕರನ್ನು ಮತ್ತು ನಿರ್ದೇಶಕರನ್ನು ಬಂಧಿಸಬೇಕೆಂದು ಮತ್ತು ಈ ಬಗ್ಗೆ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಅರಣ್ಯ ಇಲಾಖೆ ಮುಂದಾಗಬೇಕು ಎಂದು ಎಚ್ಚರಿಸಿದ್ದಾರೆ.

ಪತ್ರಿಕಾ ಗೋಷ್ಠಿಯಲ್ಲಿ ಉಪಾಧ್ಯಕ್ಷರು ಮತ್ತು ಕಾನೂನು ಸಲಹೆಗಾರರಾದ ಡಾ. ಎಂ.ಸಿ.ನರಹರಿ, ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್, ಕಾರ್ಯದರ್ಶಿ ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಆವರಣದಲ್ಲಿ ಕನ್ನಡ ರಾಜ್ಯೋತ್ಸವ



» **ಚಿತ್ರದುರ್ಗ**

ನಗರದ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಆವರಣದಲ್ಲಿ ಇಂದು 69ನೇ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಬಾಬೂಲಾಲ್ ರವರ ರಾಷ್ಟ್ರ ಧ್ವಜಾರೋಹಣವನ್ನು ನೇರವೇರಿಸಿ, ಕನ್ನಡಾಂಬೆಯ ಬಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕರ್ನಾಟಕ ಏಕೀಕರಣವನ್ನು ಮಾಡಿದ ಮಹಾನೀಯರನ್ನು ಇಂದು ನಾವುಗಳು ಸ್ಮರಣೆಯನ್ನು ಮಾಡುವುದರ ಮೂಲಕ ಇಂದಿನ ಪೀಳಿಗೆಗೆ ಅದನ್ನು ತಿಳಿಸುವಂತ ಕಾರ್ಯವನ್ನು ಮಾಡಬೇಕಿದೆ. ನಮ್ಮ ಜೀವನದಲ್ಲಿ ಕನ್ನಡವನ್ನು ಬಳಕೆ ಮಾಡುವುದರ ಮೂಲಕ ಕನ್ನಡ ಭಾಷೆಯನ್ನು ಬೆಳಸುವ ಕಾರ್ಯವನ್ನು ಎಲ್ಲರು ಸೇರಿ ಮಾಡಬೇಕಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾರ್ಶನಾಥ್ ವಿದ್ಯಾ ಸಂಸ್ಥೆಯ ಉಪಾಧ್ಯಕ್ಷರಾದ ಉತ್ತಮ ಚಂದ್, ಕಾರ್ಯದರ್ಶಿ ಸುರೇಶ್ ಕುಮಾರ್, ಚಿತ್ರಕಲಾವಿದ ನಾಗರಾಜ್ ಬೇದ್ರೇ, ಶಾಲೆಯ ಮುಖ್ಯ ಶಿಕ್ಷಕಿಯಾದ ನಾಜೀಮ್ ಶಿಕ್ಷಕಿಯರಾದ ವಿಜಯಲಕ್ಷ್ಮೀ, ಶಾಂತ ಭಾಗವಹಿಸಿದ್ದರು ಇದೇ ಸಂದರ್ಭದಲ್ಲಿ ಶಾಲೆಯ ಮಕ್ಕಳು ನಾಡು-ನುಡಿಗೆ ಸಂಬಂಧಪಟ್ಟ ನೃತ್ಯಗಳನ್ನು ಪ್ರದರ್ಶನ ಮಾಡಿದರು.

### ಪ್ರಧಾನ ಅಂಚೆ ಕಛೇರಿಯಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮ




» **ಚಿತ್ರದುರ್ಗ**

ಇಲ್ಲಿನ ಪ್ರಧಾನ ಅಂಚೆ ಕಛೇರಿಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಅಂಚೆ ಅಧೀಕ್ಷಕರಾದ ಉಷಾ ಅವರು ಮಾತನಾಡುತ್ತಾ ಕನ್ನಡ ರಾಜ್ಯೋತ್ಸವ ನಮ್ಮೆಲ್ಲರ ಹೆಮ್ಮೆಯ ವಿಷಯವಾಗಿದ್ದು ಕೇವಲ ಸರ್ಕಾರಿ ಕಚೇರಿಗಳಿಗೆ ಸೀಮಿತವಾಗದೆ ಎಲ್ಲಾ ಮನೆಮನೆಗಳಲ್ಲಿ ಆಚರಿಸುವಂತ ನಾಡ ಹಬ್ಬವಾಗಿದೆ ಇದರಿಂದ ನಮ್ಮ ಭಾಷೆಯ ಮೇಲೆ ಇರುವ ಪ್ರೀತಿ ಅಭಿಮಾನವನ್ನು ನಾವೆಲ್ಲರೂ ಬೆಳೆಸಿಕೊಳ್ಳಬೇಕಾಗಿದೆ ಎಂದು ಕರೆಕೊಟ್ಟರು ಅಂಚೆ ಪಾಲಕರಾದ ದೇವರಾಜ ಅಧ್ಯಕ್ಷತೆ ವಹಿಸಿದ್ದರು,ಕರಿಸಿದ್ದಪ್ಪ,ನಿಜಲಿಂಗಪ್ಪ, ಮಂಜುನಾಥ, ಮಧುಸೂದನ್, ಶ್ರೀನಿವಾಸ, ಲಿಂಗೇಶ, ಯಲ್ಲಮ್ಮ, ಶಶಿಕಲಾ, ಸುಧಾ, ನಿಂಗಮ್ಮ, ಸಂತೋಷ, ಶಶಿಕಾಂತ್, ಜೈಮಾರುತಿ ,ಬೀರಪ್ಪ ಜವಲೇರ್,ಅರುಣ್ ,ವರ್ಷ ಹಾಗೂ ಪ್ರಧಾನ ಅಂಚೆಕಛೇರಿ ಎಲ್ಲಾ ಅಂಚೆ ಸಿಬ್ಬಂದಿ ಭಾಗವಹಿಸಿದ್ದರು.


### ಡಾ.ಬಿ.ಸಿ.ಅನಂತರಾಮುಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ

» **ಚಿತ್ರದುರ್ಗ**

ವಿವಿಧ ಕ್ಷೇತ್ರಗಳಲ್ಲಿನ ಸಾಧಕರನ್ನು ಗುರುತಿಸಿ ಜಿಲ್ಲಾಡಳಿತದಿಂದ ಪ್ರತಿ ವರ್ಷವೂ ಕೊಡಲ್ಪಡುವ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರಾದ ಡಾ.ಬಿ.ಸಿ.ಅನಂತರಾಮು ಸೇರಿದಂತೆ ನಾನಾ ವಲಯಗಳಲ್ಲಿನ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಯಿತು.ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಪ್ರಶಸ್ತಿ ಪ್ರದಾನ ಮಾಡಿದರು. ಜಿಲ್ಲಾಧಿಕಾರಿ, ಜಿಲ್ಲಾ ರಕ್ಷಣಾಧಿಕಾರಿ ಗಳು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿದ್ದರು.

### ಜಾನಪದ ಕಲಾವಿದಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ

» **ಚಿತ್ರದುರ್ಗ**



ಕಳೆದ ಇಪ್ಪತ್ತು ವರ್ಷಗಳಿಂದಲೂ ಜಾನಪದ ಕಲೆಯಲ್ಲಿ ತೊಡಗಿರುವ ಹುಲ್ಲೇಹಾಳ್‌ನ ಡಿ.ನಾಗರಾಜ್‌ಗೆ ಜಿಲ್ಲಾಡಳಿತದಿಂದ ನಡೆದ 69 ನೇ ಕನ್ನಡ ರಾಜ್ಯೋತ್ಸವದಲ್ಲಿ ಶುಕ್ರವಾರ ಸನ್ಮಾನಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿನ ಸಾಧಕರಿಗೆ ಕನ್ನಡ ರಾಜ್ಯೋತ್ಸವದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಡಿ.ನಾಗರಾಜ್ ಕೊಂಬು ಕಹಳೆ, ನಾಸಿಕ್‌ಡೋಲ್, ಅರೆವಾದ್ಯ, ಕರಡಿ ಮಜಲು, ಹಂಪಿ ಉತ್ಸವ, ಮೈಸೂರು ದಸರಾ, ಶರಣ ಸಂಸ್ಕೃತಿ ಒಳಗೊಂಡಂತೆ ಅನೇಕ ಜಯಂತಿಯಗಳಲ್ಲಿ ತಮ್ಮಲ್ಲಿರುವ ಜಾನಪದ ಕಲೆಯನ್ನು ಪ್ರದರ್ಶಿಸಿದ್ದಾರೆ.

# ಅಸ್ಪೃಶ್ಯತೆ ಪ್ರಕರಣ: ಪ್ರಮುಖ ಆರೋಪಿಗಳ ಬಂಧಿಸಿ

» **ಚಿತ್ರದುರ್ಗ**



ಚಳ್ಳಕೆರೆ ತಾಲ್ಲೂಕು ಕಾಲುವೆಹಳ್ಳಿಯಲ್ಲಿ ಇತ್ತೀಚೆಗೆ ಮಾದಿಗ ಸಮುದಾಯದ ಮೇಲೆ ನಡೆದ ದಬ್ಬಾಳಿಕೆಗೆ ಸಂಬಂಧಿಸಿದಂತೆ ನೆಪ ಮಾತ್ರಕ್ಕೆ ಒಬ್ಬನನ್ನು ಬಂಧಿಸಿ ಪ್ರಮುಖ ಆರೋಪಿಗಳಾದ ನಾಲ್ವರನ್ನು ಇನ್ನು ಬಂಧಿಸಿಲ್ಲ, ಇನ್ನೆರಡು ದಿನಗಳಲ್ಲಿ ಪತ್ತೆ ಹಚ್ಚಿ ಬಂಧಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸಬೇಕಾಗುತ್ತದೆಂದು ಭಾರತೀಯ ದಲಿತ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಡಾ.ಹೆಚ್.ಪ್ರಕಾಶ್ ಬೀರಾವರ ಪೋಲೀಸ್ ಇಲಾಖೆಗೆ ಗಡುವು ನೀಡಿದ್ದಾರೆ.

ಪತ್ರಕರ್ತರ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅನೇಕ ವರ್ಷಗಳಿಂದಲೂ ಕಾಲುವೆಹಳ್ಳಿಯಲ್ಲಿ ಅಸ್ಪೃಶ್ಯತೆ ತಾಂಡವವಾಡುತ್ತಿದೆ. ಏಳುನೂರು ಮಂದಿ ನಾಯಕ ಜನಾಂಗದವರಿದ್ದು, ಕೇವಲ 25 ಜನ ಮಾದಿಗರಿದ್ದಾರೆ. ಕ್ಷೌರ ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ಮಾದಿಗರ ಮೇಲೆ ದಬ್ಬಾಳಿಕೆ ನಡೆಯುತ್ತಿದೆ. ಪ್ರಕರಣ ದಾಖಲಾಗಿ ಎಂಟು ದಿನಗಳಾಗಿದ್ದರೂ ಪ್ರಮುಖ ಆರೋಪಿಗಳನ್ನು ಇನ್ನು ಬಂಧಿಸಿಲ್ಲ. ನೆಪ ಮಾತ್ರ ಕ್ಷೌರಿಕನೊಬ್ಬನನ್ನು ಪೋಲೀಸರು ಬಂಧಿಸಿ ನಿರ್ಲಕ್ಷ್ಯ ವಹಿಸಿದ್ದಾರೆ. ಚಳ್ಳಕೆರೆ ಡಿ.ವೈ.ಎಸ್ಪಿ. ವೃತ್ತ ನಿರೀಕ್ಷಕ ಇವರುಗಳನ್ನು ಕೂಡಲೆ ಅಮಾನತ್ತುಗೊಳಿಸಬೇಕು. ಇಲ್ಲವಾದಲ್ಲಿ ರಾಜ್ಯದ ಮೂಲೆ ಮೂಲೆಗಳಿಂದ ಮಾದಿಗರನ್ನು ಕರೆಸಿ ಚಿತ್ರದುರ್ಗದಲ್ಲಿ ಬೃಹತ್ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.

ಮಾದಿಗರನ್ನು ನಾವು ಸಂಬಳಕ್ಕಿಟ್ಟುಕೊಂಡಿದ್ದೇವೆ. ಅವರುಗಳಿಗೆ ನೀವು ಯಾವುದೇ ಕಾರಣಕ್ಕೂ ಕ್ಷೌರ ಮಾಡಬಾರದೆಂದು ಬೆದರಿಕೆ ಹಾಕುತ್ತಿರುವ ನಾಯಕ ಜನಾಂಗದ ನಾಲ್ವರನ್ನು ಮೊದಲು ಬಂಧಿಸಬೇಕು. ಕೆಲವು ಆರ್.ಎಸ್.ಎಸ್.ನವರು, ರೈತರ ಮುಖಂಡರುಗಳು ಚಿತ್ರದುರ್ಗದಕ್ಕೆ ಬಂದು ಪ್ರಜಾಪ್ರಭುತ್ವ ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಅವರ ಊರುಗಳಲ್ಲಿಯೇ ಅಸ್ಪೃಶ್ಯತೆ ಇನ್ನು ಜೀವಂತವಾಗಿದೆ. ಪ್ರಮುಖ ನಾಲ್ವರನ್ನು ಬಂಧಿಸದಂತೆ ರಾಜಕೀಯ ಒತ್ತಡವಿರುಬಹುದೆಂದು ಡಾ.ಹೆಚ್.ಪ್ರಕಾಶ್ ಬೀರಾವರ ಆರೋಪಿಸಿದರು.

ದಲಿತ ಮುಖಂಡ ಚಿಕ್ಕಗೊಂಡನಹಳ್ಳಿ ಮಲ್ಲಿಕಾರ್ಜುನ್ ಮಾತನಾಡಿ ಸಮನ್ವಯ ಸಮಿತಿ ರಚಿಸಿ ಕಾಲುವೆಹಳ್ಳಿಯಲ್ಲಿ ಸಹೋದರತ್ವಬೆಸೆಯುವಕೆಲಸವಾಗಬೇಕು. ಮಾದಿಗರು ಮತ್ತು ನಾಯಕ ಜನಾಂಗದರು ಅಣ್ಣ-ತಮ್ಮಂದಿರಂತೆ ಬದುಕುವುದು ನಮಗೆ ಬೇಕಾಗಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದು 77 ವರ್ಷಗಳಾಗಿದ್ದರೂ ಇನ್ನು ಮಾದಿಗರ ಮೇಲಿನ ಅಸ್ಪೃಶ್ಯತೆ ನಿಂತಿಲ್ಲ ಎನ್ನುವುದೇ ನಮಗೆ ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ದಲಿತ ಸಂಘಟನೆ ಒಕ್ಕೂಟದ ಉಪಾಧ್ಯಕ್ಷ ಕೆ.ರಾಜಣ್ಣ ಮಾತನಾಡುತ್ತ ಸಹೋದರ ಸಮಾಜದಿಂದಲೇ ನಮ್ಮ ಮೇಲೆ ಅಸ್ಪೃಶ್ಯತೆ ನಡೆಯುವುದಾದರೆ ಇನ್ನು ಸವರ್ಣಿಯರು ಮಾದಿಗರನ್ನು ಅಸ್ಪೃಶ್ಯರನ್ನಾಗಿ ಕಾಣದಿರುತ್ತಾರೆಯೇ ಎಂದು ಪ್ರಶ್ನಿಸಿದರು?

ದಲಿತ ಮುಖಂಡರುಗಳಾದ ಎಂ.ಆರ್.ಶಿವರಾಜ್, ಜೆ.ಜೆ.ಹಟ್ಟಿ ಶಿವಣ್ಣ, ಬಂಗಾರಪ್ಪ, ಪ್ರಕಾಶ್ ಜಿ.ಎಂ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಸರ್ಕಾರಿ ಉರ್ದು ಶಾಲೆಯಲ್ಲಿ ರಾಜ್ಯೋತ್ಸವ

» **ಚಿತ್ರದುರ್ಗ**



ಕನ್ನಡ ಬದುಕಿನ ಅಸ್ಮಿತೆ, ಭವಿಷ್ಯದ ಭಾಷೆ. ಯಾವುದೇ ಒಂದು ಜಾತಿ ಧರ್ಮಕ್ಕೆ ಸೀಮಿತಗೊಳಿಸಬಾರದು. ಕರ್ನಾಟಕದಲ್ಲಿರುವ ಏಳು ಕೋಟಿ ಜನರು ಕನ್ನಡವನ್ನು ಮಾತನಾಡುವ ಮೂಲಕ ಕನ್ನಡವನ್ನು ಉಳಿಸಿ ಬೆಳೆಸುವ ಕೆಲಸ ಮಾಡಬೇಕೆಂದು ನಿವೃತ್ತ ಪ್ರಾಚಾರ್ಯರಾದ ಜೆ.ಯಾದವರೆಡ್ಡಿ ತಿಳಿಸಿದರು.

ನಗರದ ಹಳೆ ಮಾಧ್ಯಮಿಕ ಶಾಲಾ ಆವರಣದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ 69 ಕನ್ನಡ ರಾಜ್ಯೋತ್ಸವದಲ್ಲಿ ಕನ್ನಡಾಂಭೆಗೆ ನಮಿಸಿ ಮಾತನಾಡಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಅನೇಕ ಸಾಹಿತಿಗಳು ಕನ್ನಡವನ್ನು ಶ್ರೀಮಂತ ಭಾಷೆಯನ್ನಾಗಿಸಿದ್ದಾರೆ. ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳು ಸಿಕ್ಕಿರುವುದು ಕನ್ನಡಕ್ಕೆ ಮಾತ್ರ. ಖಾಸಗಿ ಶಾಲೆಗಳು ಕನ್ನಡವನ್ನು ನಿರ್ಲಕ್ಷಿಸುತ್ತಿರುವುದು ನೋವಿನ ಸಂಗತಿ. ಕನ್ನಡಕ್ಕೆ ಮೊದಲ ಆದ್ಯತೆ ನೀಡಬೇಕು. ನಂತರ ಹಿಂದಿ, ಇಂಗ್ಲಿಷ್ ಕಲಿತರೆ ತಪ್ಪೇನಿಲ್ಲ. ಕನ್ನಡದ ಮೇಲೆ ಅನ್ಯ ಭಾಷೆಯನ್ನು ಹೇರಬಾರದು. ಎಸ್.ನಿಜಲಿಂಗಪ್ಪ,ಜಾಫರ್‌ಷರೀಫ್ ಸೇರಿದಂತೆ ಅನೇಕರು ಈ ಶಾಲೆಯಲ್ಲಿ ಓದಿ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಮದರಸಗಳಲ್ಲಿಯೂ ಕನ್ನಡ ಭಾಷೆ ಕಲಿಸುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ ಎಂದು ಹರ್ಷ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ ಮಾತನಾಡುತ್ತ ದ.ರಾ.ಬೇಂದ್ರೆ, ಕುವೆಂಪು, ಆಲೂರು ವೆಂಕಟರಾಯರು ಸೇರಿದಂತೆ ಅನೇಕ ಮಹನೀಯರು ಕನ್ನಡಕ್ಕಾಗಿ ಹೋರಾಡಿರುವುದರಿಂದ ಇಂದು ನಾವು ನೀವುಗಳೆಲ್ಲರೂ ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತಿದ್ದೇವೆ. ಪ್ರತಿಯೊಬ್ಬರು ಕನ್ನಡ ನಾಡು, ನುಡಿಯ ಬಗ್ಗೆ ಅಭಿಮಾನವಿಟ್ಟುಕೊಳ್ಳಬೇಕೆಂದರು.

ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಸೈಯದ್ ಇಸ್ಮಾಯಿಲ್, ಉಪಾಧ್ಯಕ್ಷ ಆದಿಲ್, ಮುಖ್ಯ ಶಿಕ್ಷಕಿ ತಸ್ಮಿಯ ಹಾಗೂ ಶಿಕ್ಷಕ ವೃಂದದವರು ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಒನಕೆ ಓಬವ್ವಳ ಜಯಂತಿ ಕರಪತ್ರ ಬಿಡುಗಡೆ



» **ಚಿತ್ರದುರ್ಗ**

ಇದೆ ತಿಂಗಳ 11 ರಂದು ಚಿತ್ರದುರ್ಗದಲ್ಲಿ ನಡೆಯುವ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಅದ್ದೂರಿಯಾಗಿ ಆಚರಿಸುವ ಕುರಿತು ಛಲವಾದಿ ಜನಾಂಗದ ಮುಖಂಡರು ಭಾನುವಾರ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆ ನಡೆಸಿ ಕರಪತ್ರ ಬಿಡುಗಡೆಗೊಳಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಛಲವಾದಿ ಸಮಾಜದ ಮುಖಂಡ ಹೆಚ್.ಸಿ.ನಿರಂಜನಮೂರ್ತಿ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಸಂಯುಕ್ತಾಶ್ರಯದಲ್ಲಿ ನಡೆಯುವ ಒನಕೆ ಓಬವ್ವ ಜಯಂತಿಗೆ ಛಲವಾದಿ ಜನಾಂಗದವರೆಲ್ಲಾ ಸೇರಿ ಕೈಜೋಡಿಸಿ ಊರಿನ ಹಬ್ಬದ ರೀತಿಯಲ್ಲಿ ಆಚರಿಸಿ ಒನಕೆ ಓಬವ್ವಳ ಸಾಹಸ, ದಿಟ್ಟತನವನ್ನು ಮುಂದಿನ ಪೀಳಿಗೆಗೆ ಪರಿಚಯಿಸೋಣ ಎಂದರು.

ಅಂದು ಬೆಳಿಗ್ಗೆ 8-30 ಕ್ಕೆ ಹೊಳಲ್ಕೆರೆ ರಸ್ತೆಯಲ್ಲಿರುವ ಒನಕೆ ಓಬವ್ವ ದೇವಸ್ಥಾನದಿಂದ ಪುಷ್ಪಾಲಂಕೃತ ಸಾರೋಟಿನಲ್ಲಿ ಓಬವ್ವಳ ಭಾವಚಿತ್ರದೊಂದಿಗೆ ವಿವಿಧ ಕಲಾತಂಡಗಳ ಮೆರವಣಿಗೆ ಹೊರಟು ರಂಗಮಂದಿರ ತಲುಪಲಿದ್ದು, ಹನ್ನೊಂದು ಗಂಟೆಗೆ ವೇದಿಕೆ ಕಾರ್ಯಕ್ರಮ ಆರಂಭವಾಗಲಿದೆ. ಛಲವಾದಿ ಜನಾಂಗದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಯಂತಿಯನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಛಲವಾದಿ ಜನಾಂಗದ ಮಂಜುನಾಥ್ ಮಾತನಾಡಿ ಒಬವ್ವಳ ಜಯಂತಿ ಮೂಲಕ ಛಲವಾದಿ ಜನಾಂಗದವರು ಒಂದೆಡೆ ಸೇರಿ ಸಂಘಟನೆಯಾಗೋಣ. ಇದರಿಂದ ಮುಂದಿನ ಪೀಳಿಗೆಗೆ ಪರಂಪರೆಯನ್ನು ಉಳಿಸಿದಂತಾಗುತ್ತದೆಂದು ಸಲಹೆ ನೀಡಿದರು.

ಕೃಷಿ ಇಲಾಖೆ ನಿವೃತ್ತ ಉಪ ನಿರ್ದೇಶಕ ಛಲವಾದಿ ಸಮಾಜದ ವೆಂಕಟೇಶ್ ಮಾತನಾಡುತ್ತ ಒನಕೆ ಓಬವ್ವ ಜಯಂತಿಯಲ್ಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ಸಾಧಕರುಗಳನ್ನು ಗುರುತಿಸಿ ಸನ್ಮಾನಿಸೋಣ ಎಂದು ಹೇಳಿದರು. ಪಿ.ವಿ.ಎಸ್.ಆಸ್ಪತ್ರೆಯ ಡಾ.ಪಿ.ವಿ.ಶ್ರೀಧರಮೂರ್ತಿ, ನ್ಯಾಯವಾದಿಗಳಾದ ಹೆಚ್.ಅಣ್ಣಪ್ಪಸ್ವಾಮಿ, ಎನ್.ಶಶಾಂಕ್, ಛಲವಾದಿ ಸಮಾಜದ ಮುಖಂಡರುಗಳಾದ ಬಾಳೆಕಾಯಿ ಶ್ರೀನಿವಾಸ್, ಎಸ್.ಎನ್.ರವಿಕುಮಾರ್, ನವೀನ್, ಶಿಕ್ಷಣ ಇಲಾಖೆಯ ನಾಗರಾಜ್, ಜಯರಾಂ ಕೆ. ಪರಮೇಶ್ವರಪ್ಪ ಪೂಜಾರ್, ಪ್ರದೀಪ್, ಸೋಮಣ್ಣ, ಹನುಮಂತಪ್ಪ, ಈರಜ್ಜನಹಟ್ಟಿ ತಿಪ್ಪೇಸ್ವಾಮಿ, ಜಗ್ಗಣ್ಣ, ರಂಗಸ್ವಾಮಿ ಸೇರಿದಂತೆ ಇನ್ನು ಅನೇಕರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.



**ಚಳ್ಳಕೆರೆ ನಗರದ ಪ್ರವಾಸಿಮಂದಿರದ ಮುಂಭಾಗದಲ್ಲಿರುವ ಲಕ್ಷ್ಮಿನರಸಿಂಹಸ್ವಾಮಿ ಹಾರ್ಡ್‌ವೇರ್‌ಗೆ ಶಾಸಕ ಟಿ.ರಘುಮೂರ್ತಿ ಭೇಟಿ ನೀಡಿದ ಸಂದರ್ಭದಲ್ಲಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ರಾಜೇಶ್, ಜೀವಿತಾ, ರುದ್ರಮುನಿ, ಬಿ.ಟಿ.ರಮೇಶ್‌ಗೌಡ, ಜ್ಯೋತಿ, ಕರೀಕೆರೆನಾಗರಾಜು ಮೊದಲಾದವರು ಇದ್ದರು.**

# ವಕ್ಫ್: ರೈತರಿಗೆ ನೀಡಿರುವ ನೋಟೀಸ್ ತಕ್ಷಣ ವಾಪಸ್: ಅಧಿಕಾರಿಗಳಿಗೆ ಸಿಎಂ ಖಡಕ್ ಸೂಚನೆ

## ಪಹಣಿಯಲ್ಲಿ ಆಗಿರುವ ತಿದ್ದುಪಡಿಗಳೂ ರದ್ದು: ಸರ್ಕಾರದ ಮಹತ್ವದ ತೀರ್ಮಾನ

» **ಬೆಂಗಳೂರು**

ವಕ್ಫ್ ವಿಚಾರದಲ್ಲಿ ರೈತರಿಗೆ ನೀಡಲಾಗಿರುವ ನೋಟಿಸ್‌ಗಳನ್ನು ತಕ್ಷಣದಿಂದಲೇ ವಾಪಸ್ ಪಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಇನ್ನು ಮುಂದೆ ರೈತರಿಗೆ ಯಾವುದೇ ರೀತಿಯ ತೊಂದರೆ ನೀಡದಂತೆ ಮುಖ್ಯಮಂತ್ರಿಯವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿಗಳು ಇಂದು ಕಂದಾಯ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಮತ್ತು ವಕ್ಫ್ ಮಂಡಳಿಯ ಹಿರಿಯ ಅಧಿಕಾರಿಗಳ ಜೊತೆ ಸುದೀರ್ಘ ಸಭೆ ನಡೆಸಿದರು.

ವಕ್ಫ್ ಜಮೀನು ವಿಚಾರದಲ್ಲಿ ಇತ್ತೀಚೆಗೆ ನಡೆದಿರುವ ಬೆಳವಣಿಗೆಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ನೋಟಿಸ್ ವಿಚಾರದಲ್ಲಿ ಕೆಲ ಅಧಿಕಾರಿಗಳು ಕೈಗೊಂಡಿರುವ ಕ್ರಮದ ಬಗ್ಗೆಯೂ ಗರಂ ಆದರು.

ಬೆಳವಣಿಗೆಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿಯವರು, ವಕ್ಫ್ ವಿಚಾರವನ್ನು ಜೆಡಿಎಸ್ ಮತ್ತು ಬಿಜೆಪಿ ರಾಜಕಾರಣಕ್ಕೆ ಬಳಸಿಕೊಳ್ಳುತ್ತಿದೆ. ಈ ಮೂಲಕ ರಾಜ್ಯದಲ್ಲಿ ಶಾಂತಿ ಕದಡುವ ದುಷ್ಟ ಪ್ರಯತ್ನವನ್ನು ಆ ಪಕ್ಷಗಳು ಜಂಟಿಯಾಗಿ ಮಾಡುತ್ತಿವೆ.

ಇಂತಹ ಹೀನ ಪ್ರಯತ್ನಗಳಿಗೆ ರಾಜ್ಯದ ಜನರು ಸೊಪ್ಪು ಹಾಕದಂತೆ ಮುಖ್ಯಮಂತ್ರಿಯವರು ವಿನಂತಿ ಮಾಡಿದರು. ಜೊತೆಗೆ ಅಪ ಪ್ರಚಾರಗಳಿಗೆ ಕಿವಿಗೊಡದಂತೆ ಕೋರಿದರು.

ಅಧಿಕಾರಿಗಳೂ ಈ ಕುರಿತು ಎಚ್ಚರ ವಹಿಸಬೇಕು. ರೈತರಿಗೆ ತೊಂದರೆ ಆಗುವ ಯಾವುದೇ ತೀರ್ಮಾನವನ್ನು ಕೈಗೊಳ್ಳಬಾರದು ಎಂದು ಸಿಎಂ ನಿರ್ದೇಶನ ನೀಡಿದರು.

**ಸಭೆಯಲ್ಲಿ ಕೈಗೊಂಡ ಪ್ರಮುಖ ನಿರ್ಣಯಗಳು :**

**1.ರೈತರ ಪಹಣಿ ಬದಲಾವಣೆ ಸಂಬಂಧ ಈಗಾಗಲೇ ನೀಡಿರುವ ನೋಟೀಸ್‌ಗಳನ್ನು ತಕ್ಷಣ ವಾಪಸ್ ಪಡೆಯಬೇಕು.**

**2.ರೈತರು ಸ್ವಾಧೀನದಲ್ಲಿರುವ ಜಮೀನುಗಳಿಗೆ ಯಾವುದೇ ರೀತಿಯ ತೊಂದರೆ ನೀಡಬಾರದು.**

**3.ಕಾನೂನು ಬಾಹಿರವಾಗಿ ಹಾಗೂ ನೋಟೀಸ್ ನೀಡದೆ ಪಹಣಿಯಲ್ಲಿ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡಿದ್ದರೆ ತಕ್ಷಣ ರದ್ದು ಮಾಡಬೇಕು**

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಟಾರಿಯಾ, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಪೊನ್ನಣ್ಣ, ವಕ್ಫ್ ಮಂಡಳಿಯ ಸಿಇಒ ಜಿಲಾನಿ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶ[illegible] ನಸೀರ್ ಅಹಮದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಾರ್ಯದರ್ಶಿ ಮನೋಜ್ ಜೈನ್ ಮುಂತಾದವರು ಸಭೆಯಲ್ಲಿ ಹಾಜರಿದ್ದರು.

## ಪ್ರಮುಖ ಸುದ್ದಿ

# ರಾಮಾಯಣ ಮೌಲ್ಯಗಳು ಸರ್ವಕಾಲಕ್ಕೂ ಶ್ರೇಷ್ಠ

» **ನಮ್ಮಜನ ಸಮಾಚಾರ**



ಚಳ್ಳಕೆರೆ: ವಾಲ್ಮೀಕಿ ಮಹರ್ಷಿಗಳು ರಚಿಸಸಿದಂತ ಶ್ರೀ ರಾಮಾಯಣ ಮಹಾ ಕಾವ್ಯದ ಮೌಲ್ಯಗಳು ಸರ್ವಕಾಲಕ್ಕೂ ಶ್ರೇಷ್ಠ ಎಂದು ನಿವೃತ್ತ ಕೆ ಎಸ್ ಅಧಿಕಾರಿ ಎನ್ ರಘುಮೂರ್ತಿ ಹೇಳಿದರು

ಅವರು ತಳಕು ಹೋಬಳಿಯ ಭೋಗನಹಳ್ಳಿ ಗ್ರಾಮದಲ್ಲಿ ವಾಲ್ಮೀಕಿ ಪುತ್ಥಳಿ ಪ್ರತಿಷ್ಠಾಪನ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿ ಸಹ ಬಾಳ್ವೆಗೆ ಸಾಮರಸ್ಯಕ್ಕೆ ಮತ್ತು ಭಾತೃತ್ವಕ್ಕೆ ಬೇಕಾದ ಎಲ್ಲಾ ಅಂಶಗಳನ್ನು ಶ್ರೀ ರಾಮಾಯಣ ಮಹಾಕಾವ್ಯದಲ್ಲಿ ಮಹರ್ಷಿ ವಾಲ್ಮೀಕಿ ಅವರು ಪ್ರತಿಬಿಂಬಿಸಿದ್ದಾರೆ ಇವುಗಳನ್ನು ಪರಿಪೂರ್ಣವಾಗಿ ನಮ್ಮಗಳ ಬದುಕಿನಲ್ಲಿ ಅನುಷ್ಠಾನಗೊಳಿಸುವುದು ಮಾತ್ರ ನಮ್ಮಗಳ ಕರ್ತವ್ಯವಾಗಿದೆ ಸಹಸ್ರ ಶತಮಾನಗಳಿಂದಚೆಯು ಶ್ರೀ ರಾಮಾಯಣ ಮಹಾ ಕಾವ್ಯವನ್ನು ರಚಿಸಿದಂತಹ ವಾಲ್ಮೀಕಿ ಅವರು ನಮ್ಮೊಂದಿಗೆ ಜೀವಂತವಾಗಿರುತ್ತಾರೆ ಹಿಂದುಳಿದ ಪ್ರದೇಶವಾಗಿರುವ ಈ ಗಡಿ ಭಾಗದ ನಾಡಿನಲ್ಲಿ ಶೈಕ್ಷಣಿಕ ನೆಲೆಗಟ್ಟು ಇನ್ನು ಉತ್ಕೃಷ್ಟವಾಗಿ ಬೆಳೆಯುವ ಅಗತ್ಯವಿದೆ ಕುಟುಂಬದಲ್ಲಿನ ಪ್ರತಿ ಮಗುವಿಗೆ ಶ್ರೀ ರಾಮಾಯಣ ಮಹಾ ಕಾವ್ಯದ ತಿರುಳನ್ನು ಹೇಳಿ ಅತ್ಯುನ್ನತ ವಾದ ಶಿಕ್ಷಣವನ್ನು ಮಕ್ಕಳಿಗೆ ಒದಗಿಸಬೇಕೆಂದು ಮನವಿ ಮಾಡಿದರು. ಸಮಾರಂಭದಲ್ಲಿ ಉಪಸ್ಥಿತರಿದಂತಹ ಇನ್ನೊಬ್ಬ ಅತಿಥಿಗಳಾದ ಪಟೇಲ್ ಜಿ ತಿಪ್ಪೇಸ್ವಾಮಿ ಮಾತನಾಡಿ ಬಡತನ ಇದ್ದರೂ ಈ ಭಾಗದ ಜನ ಧರ್ಮ ಮತ್ತು ಸತ್ಯನಿಷ್ಠರು ಧಾರ್ಮಿಕ ಪರಂಪರೆ ಉಳ್ಳವರು ವಾಲ್ಮೀಕಿ ಅವರ ಮತ್ತು ಶ್ರೀ ರಾಮಾಯಣದ ಆದರ್ಶಗಳನ್ನು ಪಾಲಿಸುತ್ತಿರುವವರು ಇನ್ನು ಹೆಚ್ಚಿನ ಉನ್ನತ ಮಟ್ಟದ ಜೀವನ ನಡೆಸಬೇಕೆಂದರೆ ಈ ಭಾಗದವರು ಇನ್ನೂ ಹೆಚ್ಚು ಹೆಚ್ಚು ಸ್ವಾವಲಂಬಿಗಳಾಗಬೇಕು ಈ ಗ್ರಾಮದಲ್ಲಿ ಎಲ್ಲಾ ಕೋವಿನ ಜನಾಂಗಗಳಿದ್ದು ಎಲ್ಲರೂ ಸೇರಿ ಈ ದಿನ ಈ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಾಮರಸ್ಯಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು ಸಮಾರಂಭದಲ್ಲಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಆಂಜನಪ್ಪ ರವಿ ಪಾಲಣ್ಣ ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಚಿನ್ನದ ಬೆಲೆ ಅಲ್ಪ ಇಳಿಕೆ

» ಬೆಂಗಳೂರು

ಚಿನ್ನದ ಬೆಲೆ ವಾರಾಂತ್ಯದಲ್ಲಿ ಅಲ್ಪ ಇಳಿಕೆ ಆಗಿದೆ. 7,385 ರೂನಷ್ಟಿದ್ದ ಚಿನ್ನದ ಬೆಲೆ 7,370 ರೂಗೆ ಇಳಿದಿದೆ. ಅಪರಂಜಿ ಚಿನ್ನದ ಬೆಲೆ 8,056 ರೂನಿಂದ 8,040 ರೂ ಇಳಿದಿದೆ. ಬೆಳ್ಳಿ ಬೆಲೆ 97 ರೂ ಮತ್ತು 106 ರೂನಲ್ಲಿ ಮುಂದುವರಿದಿದೆ. ಶುಕ್ರವಾರದಂದು ಚಿನ್ನದ ಬೆಲೆ ಬರೋಬ್ಬರಿ 70 ರೂನಷ್ಟು ಇಳಿದಿತ್ತು. ಈಗ 13 ರೂನಷ್ಟು ಬೆಲೆ ಇಳಿಕೆ ಆಗಿದೆ. ಭಾರತದಲ್ಲಿ ಸದ್ಯ 10 ಗ್ರಾಮ್‌ನ 22 ಕ್ಯಾರಟ್ ಚಿನ್ನದ ಬೆಲೆ 73,700 ರುಪಾಯಿ ಇದೆ. 24 ಕ್ಯಾರಟ್‌ನ ಅಪರಂಜಿ ಚಿನ್ನದ ಬೆಲೆ 80,400 ರುಪಾಯಿ ಆಗಿದೆ. 100 ಗ್ರಾಮ್ ಬೆಳ್ಳಿ ಬೆಲೆ 9,700 ರುಪಾಯಿ ಇದೆ. ಬೆಂಗಳೂರಿನಲ್ಲಿ ಚಿನ್ನದ ಬೆಲೆ 10 ಗ್ರಾಮ್‌ಗೆ 73,700 ರುಪಾಯಿ ಆಗಿದೆ, ಬೆಳ್ಳಿ ಬೆಲೆ 100 ಗ್ರಾಮ್‌ಗೆ 9,700 ರುಪಾಯಿಯಲ್ಲಿ ಇದೆ.

### ಯತ್ನಾಳ್, ರಮೇಶ್ ಜಾರಕಿಹೊಳಿಗೆ ರೇಣುಕಾಚಾರ್ಯ ಚಾಲೆಂಜ್

» ದಾವಣಗೆರೆ

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ರಮೇಶ್ ಜಾರಕಿಹೊಳಿಗೆ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಚಾಲೆಂಜ್ ಹಾಕಿದ್ದಾರೆ. ದಾವಣಗೆರೆಯಲ್ಲಿ ಮಾತನಾಡಿದ ಅವರು, ನಿಮಗೆ ತಾಕತ್ ಇದ್ರೆ ವಿಜಯೇಂದ್ರ ಅವ್ರನ್ನು ಕೆಳಗಿಳಿಸಿ ನೋಡಿ. ಯಡಿಯೂರಪ್ಪ ಬಿಜೆಪಿ ಕಟ್ಟಿ, ಹೋರಾಟ ಮಾಡಿ ಪಾರ್ಟಿ ಕಟ್ಟದೇ ಇದ್ದಿದ್ದರೆ ನೀವು ಇವತ್ತು ಶಾಸಕರಾಗಿ ಇರುತ್ತಿರಲಿಲ್ಲ ಅಂತ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರದ ನಾಯಕರು ಬಿ.ವೈ. ವಿಜಯೇಂದ್ರ ಅವರನ್ನು ಅಧ್ಯಕ್ಷರನ್ನಾಗಿ ಮಾಡಿದ್ರು. ವಿಜಯೇಂದ್ರ ರಾಜ್ಯಾಧ್ಯಕ್ಷ ಆದ ಮೇಲೆ ಬಿಜೆಪಿಗೆ ಹೊಸ ರೂಪ ಬಂದಿದೆ. ವಿಜಯೇಂದ್ರ ಸಾರಥ್ಯದಲ್ಲಿ ವಾಲ್ಮೀಕಿ ಹಗರಣ ಬಯಲಿಗೆ ಬಂದಿದೆ. ಮೂಡಾ, ವಕ್ಫ್ ಬಗ್ಗೆ ಹೋರಾಟ ಮಾಡಿದ್ರು ಎಂದು ಹೇಳಿದರು.

### ರಾಜ್ಯ ಮಟ್ಟಕ್ಕೆ ಆಯ್ಕೆ



» ಚಿಕ್ಕಜಾಜೂರು

ಚಿಕ್ಕಜಾಜೂರು ಸಮೀಪದ ಹಿರೇಕಂದವಾಡಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಎಸ್. ಅಭಿಷೇಕ್ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ನೀಡಿ, ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳಾದ ಯು. ಅಭಿಲಾಶ್ 1500 ಮೀ ಓಟದಲ್ಲಿ ತೃತೀಯ ಸ್ಥಾನ ಪಡೆದರೆ, ಎಸ್. ಅಭಿಷೇಕ್ 3000 ಮೀ. ಓಟದಲ್ಲಿ ದ್ವಿತಿಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ವಿದ್ಯಾರ್ಥಿಗಳ ಸಾಧನೆಗೆ ಮುಖ್ಯ ಶಿಕ್ಷಕ ಟಿ. ಈಶ್ವರಪ್ಪ ಶಿಕ್ಷಕರು, ಎಸ್ ಡಿಎಂಸಿ ಅಧ್ಯಕ್ಷ ಉಮಾಪತಿ, ಉಪಾಧ್ಯಕ್ಷ ಷಣ್ಮುಖಪ್ಪ ಹಾಗೂ ಸದಸ್ಯರು, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತಮ್ಮ, ಉಪಾಧ್ಯಕ್ಷ ಲೋಕೇಶ್ವರಪ್ಪ ಹಾಗೂ ಸದಸ್ಯರು ಅಭಿನಂದಿಸಿದ್ದಾರೆ.

### ಆಕ್ರಮ ಗಾಂಜಾ ಸಾಗಣೆ ವ್ಯಕ್ತಿ ಸೆರೆ



» ಮೊಳಕಾಲ್ಮುರು

ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ ಗಾಂಜಾ ಸಾಗಣೆ ಮಾಡುತ್ತಿದ್ದ ವ್ಯಕ್ತಿಯೊಬ್ಬನನ್ನು ಇಲ್ಲಿನ ಅಬಕಾರಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಚಳ್ಳಕೆರೆ ತಾಲ್ಲೂಕಿನ ತಳಕು ಗ್ರಾಮದ ಮೆಹಬೂಬ್ ಸುಬಾನ್ ಬಂಧಿತ. ಆತ ತಾಲ್ಲೂಕಿನ ರಾಯಾಪುರ ಬಳಿಯ ಕೊಂಟೋಬಯ್ಯನಹಟ್ಟಿ ಕ್ರಾಸ್‌ನಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿರುವುದನ್ನು ಕಂಡು ಪರಿಶೀಲಿಸಿದಾಗ ಅರ್ಧ ಕೆ.ಜಿ.ಯಷ್ಟು ಒಣ ಗಾಂಜಾ ಸಾಗಣೆ ಮಾಡುತ್ತಿರುವುದು ಕಾಣಸಿಕ್ಕಿದೆ ಎಂದು ತಾಲ್ಲೂಕು ಅಬಕಾರಿ ನಿರೀಕ್ಷಕ ಮೊಹಮದ್ ಸಾದತ್ ಉಲ್ಲಾ ತಿಳಿಸಿದ್ದಾರೆ. ಆರೋಪಿಯನ್ನು ಮತ್ತು ಕೃತ್ಯಕ್ಕೆ ಬಳಕೆ ಮಾಡಿದ್ದ ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆಯಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಕಾರ್ಯಾಚರಣೆ ವೇಳೆ ಸಿಬ್ಬಂದಿ ತಿಮ್ಮರಾಜು, ಅರುಣ್ ಕುಮಾರ್ ಮತ್ತು ಪರಶುರಾಮ್ ಇದ್ದರು.

# ರಾಜ್ಯದಲ್ಲಿ 3 ದಿನ ಭಾರಿ ಮಳೆ ಅಲರ್ಟ್

» ಬೆಂಗಳೂರು



ಸೈಲೆಂಟ್ ಆಗಿದ್ದ ಮಳೆ ಮತ್ತೆ ಶುರುವಾಗಿದೆ. ನಿನ್ನೆಯಿಂದಲೇ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಳೆ ಸುರಿದಿದೆ. ಇಂದಿನಿಂದ ಮೂರು ದಿನಗಳ ಕಾಲ ಮಳೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮನ್ನಾರ್ ಗಲ್ಫ್ ಮತ್ತು ನೆರೆಹೊರೆಯ ಮೇಲೆ ಚಂಡಮಾರುತದ ಪರಿಚಲನೆಯು ಈಗ ದಕ್ಷಿಣ ತಮಿಳುನಾಡು ಕರಾವಳಿಯಲ್ಲಿ ಶ್ರೀಲಂಕಾದ ಪಕ್ಕದಲ್ಲಿದೆ ಮತ್ತು ಸರಾಸರಿ ಸಮುದ್ರ ಮಟ್ಟದಿಂದ 5.8 ಕಿ.ಮೀವರೆಗೆ ವಿಸ್ತರಿಸಿದೆ.

ಮೇಲಿನ ಚಂಡಮಾರುತದ ಪರಿಚಲನೆಯಿಂದ ಶ್ರೀಲಂಕಾದ ಪಕ್ಕದಲ್ಲಿರುವ ದಕ್ಷಿಣ ತಮಿಳುನಾಡು ಕರಾವಳಿಯಿಂದ ಕರಾವಳಿ ಕರ್ನಾಟಕದವರೆಗೆ ಸರಾಸರಿ ಸಮುದ್ರ ಮಟ್ಟದಿಂದ 0.9 ಕಿಮೀ ಎತ್ತರದಲ್ಲಿ ಒಂದು ಟ್ರಫ್ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಮುಂದಿನ 24 ಗಂಟೆಗಳ ಕಾಲ ಕರ್ನಾಟಕದ ಒಳನಾಡಿನಲ್ಲಿ ಮುಖ್ಯವಾಗಿ ಶುಷ್ಕ ಹವಾಮಾನವಿರಲಿದೆ. ನಿನ್ನೆ ಮಂಡ್ಯ, ಮೈಸೂರು, ಕೊಡಗು, ಚಾಮರಾಜನಗರ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆ, ಗುಡುಗು ಸಹಿತ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಯ ಒಂದು ಅಥವಾ ಎರಡು ಸ್ಥಳಗಳಲ್ಲಿ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಜಿಲ್ಲೆಗಳಲ್ಲಿ, ಕಲಬುರ್ಗಿ, ಯಾದಗಿರಿ, ರಾಯಚೂರು, ಬೆಳಗಾವಿ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರ ಮಳೆಯಾಗಿದೆ.

ಇಂದು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಮಂಡ್ಯ, ಮೈಸೂರು, ಕೊಡಗು, ಚಾಮರಾಜನಗರ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ, ಕಲಬುರ್ಗಿ, ಯಾದಗಿರಿ, ರಾಯಚೂರು, ಬೆಳಗಾವಿ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಹೇಳಿದೆ. ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವಾಮಾನ ಇರಲಿದೆ.

ನಾಳೆ ಮೈಸೂರು, ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೆಳಗಾವಿ, ಧಾರವಾಡ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರ ಮಳೆ ಬೀಳಲಿದೆ. ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವಾಮಾನದ ಸಾಧ್ಯತೆ ಇದೆ.

ನವೆಂಬರ್ 5ರಂದು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ. ಒಳನಾಡಿನ ಜಿಲ್ಲೆಗಳಲ್ಲಿ ಒಣ ಹವೆಯಿರುವ ಸಾಧ್ಯತೆ ಇದೆ. ನವೆಂಬರ್ 5 ಮತ್ತು 6ರಂದು ಹವೆಯಿರುವ ಸಾಧ್ಯತೆ ಇದೆ. ನವೆಂಬರ್ 5 ಮತ್ತು 6ರಂದು ರಾಜ್ಯದ ಜಿಲ್ಲೆಗಳ ಮೇಲೆ ಒಣ ಹವಾಮಾನವಿರಲಿದೆ.

ನವೆಂಬರ್ 8ರಂದು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೋಲಾರ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಮೈಸೂರು, ಮಂಡ್ಯ, ಚಾಮರಾಜನಗರ, ತುಮಕೂರು ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದ್ದು, ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವಾಮಾನ ಕಂಡುಬರಲಿದೆ ಎಂದು ಹೇಳಿದೆ.

ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮುಂದಿನ ಎರಡು ದಿನ ಸಾಮಾನ್ಯವಾಗಿ ಮೋಡ ಕವಿದ ಆಕಾಶ ಇರಲಿದೆ. ಹಗುರ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಕೆಲವು ಸ್ಥಳಗಳಲ್ಲಿ ಬೆಳಗಿನ ಜಾವದಲ್ಲಿ ಮಂಜು ಬೀಳುವ ಸಾಧ್ಯತೆಯಿದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 31 ಡಿಗ್ರಿ ಸೆಲ್ಸಿಯಸ್ ಹಾಗೂ 21 ಡಿಗ್ರಿ ಸೆಲ್ಸಿಯಸ್ ಇರಲಿದೆ.

# ಚನ್ನಪಟ್ಟಣ ಉಪ ಚುನಾವಣೆ: ರಾತ್ರೋರಾತ್ರಿ ರು.5000 ಗಿಫ್ಟ್ ಕೂಪನ್

» ರಾಮನಗರ

ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಬಳಿಕ ಉಪಚುನಾವಣೆಯ ಕಾವು ಜೋರಾಗಿದೆ. ರಾಜ್ಯದಲ್ಲಿ ನವೆಂಬರ್ 13 ರಂದು ನಡೆಯುವ ಮೂರು ಕ್ಷೇತ್ರ ಉಪಚುನಾವಣೆಯ ಪೈಕಿ ಚನ್ನಪಟ್ಟಣ ಅಖಾಡ ರಂಗೇರಿದ್ದು, ಚುನಾವಣಾ ಪ್ರಚಾರದ ವೇಳೆ ಕಳೆದ ರಾಮನಗರ ಚುನಾವಣೆಲ್ಲಿನ ಹಣ ಹಂಚಿಕೆ ಕುರಿತು ನಿಖಿಲ್ ಕುಮಾರಸ್ವಾಮಿ ಅವರು ಬಹಿರಂಗಪಡಿಸಿದ್ದಾರೆ.

ಚನ್ನಪಟ್ಟಣದಲ್ಲಿ ಚುನಾವಣಾ ಪ್ರಚಾರದ ವೇಳೆ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ಮಾತನಾಡಿ, ರಾಮನಗರದಲ್ಲಿ ರಾತ್ರೋರಾತ್ರಿ 5000 ಗಿಫ್ಟ್ ಕೂಪನ್ ಕೊಟ್ಟು ನನ್ನನ್ನು ಸೋಲಿಸಿದರು ಎಂದು ಹೇಳಿದರು. ಚನ್ನಪಟ್ಟಣ ತಾಲೂಕಿನಲ್ಲಿ ಒಂದು ಹಂತಕ್ಕೆ ನೀರಾವರಿ ಕಾಣ್ತಾ ಇದ್ದರೆ, ಅದು ದೇವೇಗೌಡರ ದೂರದೃಷ್ಟಿ ರಾಮನಗರಕ್ಕೆ ಶಾಶ್ವತ ನೀರಾವರಿ ವ್ಯವಸ್ಥೆ ಕಲ್ಪಿಸುವ ಸತ್ತೇಗಾಲ ನೀರಾವರಿ ಯೋಜನೆಗೆ 548 ಕೋಟಿ ಹಣ ಬಿಡುಗಡೆ ಮಾಡಿದ್ದು ಕುಮಾರಣ್ಣ. ಜಲಾಶಯಗಳನ್ನು ತುಂಬಿಸುವುದು ಮಾತ್ರವಲ್ಲದೆ ಕೆರೆಗಳನ್ನೂ ಭರ್ತಿ ಮಾಡಿದ್ದಾರೆ ಎಂದರು.

ಬಹಳ ಜನ ಕೆರೆಗಳ ತುಂಬಿಸಿದ ಭಗೀರಥ ಅಂತ ಹೇಳಿಕೊಂಡು ತಿರುಗಾಡುತ್ತಿದ್ದಾರೆ. ಆದರೆ ವಿ ಸೋಮಣ್ಣರವರು ಇದ್ದಾರೆ. ಯಾರು ಅದಕ್ಕೆ ಅನುದಾನ ಕೊಟ್ರು ಎಲ್ಲವೂ ಹಿರಿಯರಿಗೆ ಗೊತ್ತಿದೆ. ಪರಿಷತ್ ಸ್ಥಾನಕ್ಕೆ ಅವರು ರಾಜಿನಾಮೆ ಕೊಟ್ಟು ಬಂದಿದ್ದಾರೆ. ಅಧಿಕಾರದ ಆಸೆಗೆ ಕಾಂಗ್ರೆಸ್ ಪಕ್ಷಕ್ಕೆ ಸೇರಿದ್ದಾರೆ ಎಂದು ಸಿಪಿ ಯೋಗೇಶ್ವರ್ ಅವರಿಗೆ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ತಿರುಗೇಟು ನೀಡಿದರು.

ಚನ್ನಪಟ್ಟಣ ತಾಲ್ಲೂಕಿನ ನಿಮ್ಮ ಮನೆ ಮಕ್ಕಳು ನನ್ನ ಮೇಲೆ ಭರವಸೆ ಇಟ್ಟಿದ್ದಾರೆ. ಹದಿನೈದು ದಿನದ ಹಿಂದೆ ಮಂಡ್ಯದಲ್ಲಿ ಉದ್ಯೋಗ ಮೇಳ ಮಾಡಿದ್ದೇವೆ.ಇಡೀ ರಾಜ್ಯದಿಂದ ಯುವಕರು ಬಂದಿತ್ತು, ಮೊದಲನೇ ಹಂತದಲ್ಲಿ ಸಾವಿರದ ಇನ್ನೂರು ಜನರಿಗೆ ಉದ್ಯೋಗ ಕೊಡಿಸಿದ್ದೇವೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದರು.

ಕೇಂದ್ರದಲ್ಲಿ ಕುಮಾರಸ್ವಾಮಿ ಮಂತ್ರಿ ಆಗಿದ್ರೆ, ಅದು ಚನ್ನಪಟ್ಟಣ ಮಹಾಜನತೆ ಆಶೀರ್ವಾದ. ವಿ ಸೋಮಣ್ಣರವರು ಎರಡೂ ಪಕ್ಷದ ಕಾರ್ಯಕರ್ತರಿಗೆ ಆತ್ಮಸ್ಥೈರ್ಯ ತುಂಬಿದ್ದಾರೆ ಎಂದರು. ಈ ಚುನಾವಣೆ ನನ್ನ ಪಾಲಿಗೆ ಅತ್ಯಂತ ಅನೀರಿಕ್ಷಿತ. ಮಂಡ್ಯ ಜಿಲ್ಲೆಯವರು ಪ್ರೀತಿ ಕೊಟ್ಟಿದ್ದಾರೆ, ಎರಡು ಸಲ ಚುನಾವಣೆಯಲ್ಲಿ ಸೋತಿದ್ದೇನೆ ನಿಮ್ಮ ಸಹಕಾರ ಇರಲಿ ಎಂದು ನಿಖಿಲ್ ಕುಮಾರಸ್ವಾಮಿ ಮನವಿ ಮಾಡಿದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಚನ್ನಪಟ್ಟಣ ವಿಧಾನಸಭೆ ಉಪ ಚುನಾವಣೆ ಕಣದಲ್ಲಿ ಹಳ್ಳಿಹಳ್ಳಿಗೂ ತೆರಳಿ ಬಿರುಸಿನ ಪ್ರಚಾರ ನಡೆಸಿದರು. ರಾಜ್ಯ ಬಿಜೆಪಿ ವರಿಷ್ಠ ನಾಯಕರ ಜತೆಯಲ್ಲಿ ಕೂಡ್ಲೂರು, ಮಳೂರು ಪಟ್ಟಣ ಹಾಗೂ ಚೆಕ್ಕರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಚಿವರು ವಿಸ್ತೃತ ಪ್ರಚಾರ ಮಾಡಿದರು.

ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, ಮಾಜಿ ಸಚಿವ ಸಿ.ಟಿ.ರವಿ, ಸಂಸದ ಡಾ.ಸಿ.ಎನ್.ಮಂಜುನಾಥ್, ಬಿಜೆಪಿ ಜಿಲ್ಲಾಧ್ಯಕ್ಷ ಹುಲುವಾಡಿ ರಮೇಶ್ ಸೇರಿದಂತೆ ಅನೇಕ ನಾಯಕರ ಜತೆಯಲ್ಲಿ ಕೇಂದ್ರ ಸಚಿವರು ಪ್ರಚಾರ ನಡೆಸಿದರು.


ಮೊದಲು ಹೊಟ್ಟಿನ ಹೊಸಹಳ್ಳಿಯಿಂದ ಪ್ರಚಾರ ಅರಭಿಸಿದ ಸಚಿವರನ್ನು ಚೆಕ್ಕರೆ ಗ್ರಾಮದಲ್ಲಿ ಸೇರಿಕೊಂಡ ಬಿಜೆಪಿ ನಾಯಕರು ಬಿರುಸಿನ ಪ್ರಚಾರಕ್ಕೆ ಸಾಥ್ ನೀಡಿದರು.

ಪ್ರಚಾರ ವಾಹನದ ಮೇಲೆ ಭಾಷಣ ಮಾಡುತ್ತಿದ್ದ ಕುಮಾರಸ್ವಾಮಿ ಅವರಿಗೆ ಕಮಲದ ಹೂಗಳ ಗುಚ್ಛ ನೀಡಿದ ಅಶೋಕ ಮತ್ತು ಡಾ.ಸಿ.ಎನ್. ಅಶ್ವತ್ಥನಾರಾಯಣ ಅವರು ಅಭಿನಂದಿಸಿದರು. ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ನಾಯಕರಿಗೆ ಬೃಹತ್ ಹೂವಿನ ಹಾರ ಹಾಕಿ ಬರಮಾಡಿಕೊಂಡು ಸ್ವಾಗತಿಸಿದರು.



**ಹೊಸದುರ್ಗ**
**ಮುದ್ರಣಲೋಕದಲ್ಲಿ ತುಂಬಾ ವಿಶಿಷ್ಟ ವಿಭಿನ್ನ ಶೈಲಿಯ ಮುದ್ರಣಕ್ಕೆ ಹೆಸರುವಾಸಿಯಾಗಿರುವ ಕೃಷ್ಣಮೂರ್ತಿ (ಸ್ವಾನ್ ಕಿಟ್ಟಿ) ಚಿತ್ರದುರ್ಗ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದಿದ್ದು ಇಂದು ಹೊಸದುರ್ಗದ ಶ್ರೀ ಜಗದ್ಗುರು ಕುಂಚಿಟಿಗ ಮಹಾಸಂಸ್ಥಾನ ಮಠದಲ್ಲಿ ಅಭಿನಂದಿಸಿ ಆಶೀರ್ವದಿಸಿದ ಶ್ರೀ ಶಾಂತವೀರ ಸ್ವಾಮೀಜಿ. ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಹಾಗೂ ವಕೀಲರಾದ ಕೆ.ಎನ್. ವಿಶ್ವನಾಥ್ ಇದ್ದರು.**

### ರಾಜ್ಯ ಮಟ್ಟದ ಟೇಕ್ವಾಂಡೋ ಸ್ಪರ್ಧೆಗೆ ಆಯ್ಕೆ: ಸನ್ಮಾನ



» ಚಿತ್ರದುರ್ಗ

ಜ್ಞಾನವಿಕಾಸ ಶಾಲೆಯ ಹತ್ತನೆ ತರಗತಿ ವಿದ್ಯಾರ್ಥಿ ಎನ್.ಮೋಹನ್ ರಾಜ್ಯ ಮಟ್ಟದ ಟೇಕ್ವಾಂಡೋ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ನ.4 ರಿಂದ 13 ರವರೆಗೆ ಮಧ್ಯಪ್ರದೇಶದ ಭೂಪಾಲ್‌ನಲ್ಲಿ ನಡೆಯಲಿರುವ ರಾಷ್ಟ್ರ ಮಟ್ಟದ ಟೇಕ್ವಾಂಡೋ ಸ್ಪರ್ಧೆಗೆ ಆಯ್ಕೆಯಾಗಿರುವ ವಿದ್ಯಾರ್ಥಿ ಎನ್.ಮೋಹನ್‌ಗೆ ಜ್ಞಾನಿವಿಕಾಸ ಶಾಲೆಯಲ್ಲಿ ಗೌರವಿಸಿ ಜಯಶಾಲಿಯಾಗಲೆಂದು ಹಾರೈಸಲಾಯಿತು. ಜ್ಞಾನವಿಕಾಸ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷೆ ಗೀತಮ್ಮ ಎಸ್. ಕಾರ್ಯದರ್ಶಿ ಮನೋಜ್ ಎಂ. ಆಡಳಿತ ಮಂಡಳಿ ಸದಸ್ಯರು ಮುಖ್ಯೋಪಾಧ್ಯಾಯರು, ದೈಹಿಕ ಶಿಕ್ಷಕ ವೃಂದ, ಸಿಬ್ಬಂದಿ, ಪೋಷಕರು ಹಾಗೂ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಳಕಿನ ಹುಡುಕಾಟ ನಾಟಕ ಪ್ರದರ್ಶನ



» ಚಿತ್ರದುರ್ಗ

ಕಾರಂಜಿ ಕಲ್ಚರಲ್ ಟ್ರಸ್ಟ್ ಮದಕರಿಪುರ, ಮಾನ್ವಿತ ಸಾಂಸ್ಕೃತಿಕ ಸಂಘ ಚಿತ್ರದುರ್ಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವದ ಅಂಗವಾಗಿ ಮಾಳೆನಹಳ್ಳಿಯಲ್ಲಿ ಕನ್ನಡ ಗೀತೆಗಳ ಗಾಯನವನ್ನು ಹಮ್ಮಿಕೊಳ್ಳಲಾಗಿತ್ತು. ಮಾನ್ವಿತಾ ಕಲಾ ಸಂಘದ ಅಧ್ಯಕ್ಷೆ ಕೆಂಚಮ್ಮ ಕಾರ್ಯಕ್ರಮ ಉದ್ಘಾಟಿಸಿ ಟಿ.ವಿ. ಹಾಗೂ ಮೊಬೈಲ್ ಹಾವಳಿಯಿಂದ ಕನ್ನಡ ಗೀತೆಗಳನ್ನು ಕೇಳುವವರ ಸಂಖ್ಯೆ ಕಡಿಮೆಯಾಗಿದೆ ಎಂದು ವಿಷಾಧಿಸಿದರು. ಮಾಳೆನಹಳ್ಳಿ ಗ್ರಾಮದ ಮುಖಂಡರುಗಳಾದ ಮಲ್ಲಿಕಾರ್ಜುನ, ನಾಣ್ಯನಾಯ್ಕ, ಸುಮನ್, ಚಿತ್ರಲಿಂಗಪ್ಪ, ಕಲಾವಿದರಾದ ಚನ್ನಬಸಪ್ಪ, ಶ್ರೀನಿವಾಸ್‌ಮೂರ್ತಿ, ರಂಗಭೂಮಿ ಕಲಾವಿದರುಗಳಾದ ಮಧು ಟಿ. ಕುಮಾರ, ರೇಣುಕಮ್ಮ ಇವರುಗಳು ವೇದಿಕೆಯಲ್ಲಿದ್ದರು. ಇದೆ ಸಂದರ್ಭದಲ್ಲಿ ಬೆಳಕಿನ ಹುಡುಕಾಟ ನಾಟಕ ಪ್ರದರ್ಶನಗೊಂಡಿತು.

## ಪ್ರಮುಖ ಸುದ್ದಿ

# ಬಾಗಿನ ಅರ್ಪಣೆಯಲ್ಲೂ ರಾಜಕೀಯ ಬೇಡ: ಎನ್‌ವೈಜಿ

» ಮೊಳಕಾಲ್ಮುರು

ಈ ಬಾರಿ ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿದ್ದು, ಕೆಲವರು ಕೆರೆಗಳಿಗೆ ಬಾಗಿನ ಅರ್ಪಿಸುವುದರಲ್ಲೂ ರಾಜಕೀಯ ಬೆರೆಸುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಶಾಸಕ ಎನ್.ವೈ. ಗೋಪಾಲಕೃಷ್ಣ ಹೇಳಿದರು.

ತಾಲ್ಲೂಕಿನ ರಂಗಯ್ಯನದುರ್ಗ ಜಲಾಶಯ ಭರ್ತಿಯಾಗಿರುವ ಕಾರಣ ಬುಧವಾರ ಬಾಗಿನ ಅರ್ಪಿಸಿ ಅವರು ಮಾತನಾಡಿದರು.

‘ಬಾಗಿನ ಅರ್ಪಿಸುವುದು ಅವರ ವಿವೇಚನೆಗೆ ಬಿಟ್ಟಿದ್ದು. ಯಾವ ಪಕ್ಷದವರು ಬೇಕಾದರೂ ಅರ್ಪಣೆ ಮಾಡಬಹುದು. ಆದರೆ, ಕೆಲವರು ಇದನ್ನೇ ಮುಂದಿಟ್ಟುಕೊಂಡು ರಾಜಕೀಯ ಮಾಡುತ್ತಿದ್ದಾರೆ. ಇದು ಬೇಸರದ ಸಂಗತಿ. ಬಾಗಿನ ಅರ್ಪಣೆ ಜತೆಗೆ ರೈತರ ಸಮಸ್ಯೆಗಳ ಪರಿಹಾರಕ್ಕೆ ಕಾರ್ಯಕ್ರಮ ವೇದಿಕೆ ಆಗಬೇಕು ಎಂಬ ನಿಟ್ಟಿನಲ್ಲಿ ನಾನು ಸೂಕ್ತ ಸಮಯ ನೋಡಿ ಕಾರ್ಯಕ್ರಮ ನಿಗದಿ ಮಾಡುತ್ತಿದ್ದೇನೆ. ಕೆಲವರು ಅವಸರದಲ್ಲಿ ಬಂದು ಅರ್ಪಣೆ ಮಾಡುತ್ತಿರುವುದರಲ್ಲಿ ಅರ್ಥವಿಲ್ಲ’ ಎಂದು ಟೀಕಿಸಿದರು

‘ಹಲವು ವರ್ಷಗಳ ಹಿಂದೆ ರಂಗಯ್ಯನದುರ್ಗ



ಜಲಾಶಯದಲ್ಲಿ ಮೂಲಸೌಕರ್ಯಗಳಿಲ್ಲದೇ ಸಾಕಷ್ಟು ತೊಂದರೆಯಾಗಿತ್ತು. ನಾನು ಶಾಸಕನಾಗಿದ್ದಾಗ ಲಭ್ಯ ಅನುದಾನವನ್ನು ಬಳಸಿಕೊಂಡು ನಾಲೆಗಳ ಅಭಿವೃದ್ಧಿ, ಸಂಪರ್ಕ ರಸ್ತೆ ನಿರ್ಮಾಣ, ಏರಿ ನಿರ್ಮಾಣ, ಜಂಗಲ್ ಕಟ್ಟಿಂಗ್ ಮಾಡಿಸಲಾಗಿತ್ತು. ಈಚೆಗೆ ಗೇಟ್‌ಗಳು ತೊಂದರೆಗೀಡಾದಾಗ ಮರಳು ಚೀಲಗಳನ್ನು ಹಾಕಿ ಸಣ್ಣ ನೀರಾವರಿ ಇಲಾಖೆ ನೀರು ಉಳಿಸುವ ಕೆಲಸ ಮಾಡಿದೆ. ಆದ್ಯತೆ ಮೇರೆಗೆ ಜಲಾಶಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು’ ಎಂದು ಭರವಸೆ ನೀಡಿದರು.

ಸಿದ್ದಯ್ಯನಕೋಟೆ ಮಠದ ಬಸವಲಿಂಗ ಸ್ವಾಮೀಜಿ, ರಾಂಪುರ ರುದ್ರಾಕ್ಷಿ ಮಠದ ವೀರಭದ್ರಯ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಜಿಲ್ಲಾ ಉಪ ವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಟಿ.ಜಗದೀಶ್, ಮುಖಂಡರಾದ ಜಿ.ಪ್ರಕಾಶ್, ಅಬ್ದುಲ್ ಸುಬಾನ್‌ಸಾನ್, ವಿ.ಮಾರನಾಯಕ, ವಿ.ದೇವಯ್ಯ, ಜಿ.ಪಿ.ಸುರೇಶ್, ನಾಗಸಮುದ್ರಗೋವಿಂದಪ್ಪ,ಬಿ.ಟಿ.ನಾಗಭೂಷಣ, ಎಂ.ಡಿ.ಲತೀಫ್‌ಸಾಬ್, ಜಿ.ಬಸಣ್ಣ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T